# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 02 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–07–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 02 | Title- Code: KARKAN 28269 | Chitradurga | Date: 11-07-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜು.14 ರಂದು ಹೊಸದುರ್ಗಕ್ಕೆ ಕನ್ನಡ ಜ್ಯೋತಿ ರಥಯಾತ್ರೆ 2

ಖಾಸಗಿ ಗಣಿ ಕಂಪನಿಗಳು ಸಾಮಾಜಿಕ ಹೊಣೆಗಾರಿಕೆ ಪ್ರದರ್ಶಿಸಲಿ: ಕಾರಜೋಳ 3

ಭದ್ರಾ ಭೂಸ್ವಾಧೀನ ಪ್ರಕ್ರಿಯೆ ಚುರುಕುಗೊಳಿಸಿ: ಸಂಸದ ಕಾರಜೋಳ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ಹಿರಿಯ ಪತ್ರಕರ್ತ ಅಹೋಬಳಪತಿ ನೇಮಕ

» ನಮ್ಮಜನ.ಕಾಂ,

ಚಿತ್ರದುರ್ಗ : ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ಚಿತ್ರದುರ್ಗ ಜಿಲ್ಲೆಯ ಹಿರಿಯ ಪತ್ರಕರ್ತ ಹಾಗೂ ವಿಜಯ ಕರ್ನಾಟಕ ಪತ್ರಿಕೆಯ ಚಿತ್ರದುರ್ಗ ಜಿಲ್ಲೆಯ ವಿಶೇಷ ವರದಿಗಾರರಾದ ಎಂ.ಎನ್. ಅಹೋಬಳಪತಿ ಅವರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಮಹತ್ವದ ಬೆಳವಣಿಗೆಯಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಗೆ ಹಿರಿಯ ಪತ್ರಕರ್ತೆ ಆಯೇಷಾ ಖಾನಂ ಅವರನ್ನು ಅಧ್ಯಕ್ಷರನ್ನಾಗಿ ರಾಜ್ಯ ಸರ್ಕಾರ ನೇಮಿಸಿದೆ. ಅಕಾಡೆಮಿ ಸದಸ್ಯರಾಗಿ ಹಿರಿಯ ಪತ್ರಕರ್ತರಾದ ಎಂ.ಎನ್. ಅಹೋಬಲಪತಿ, ಕೆ.ನಿಂಗಪ್ಪ, ಛಾಯಾಗ್ರಾಹಕ ಕೆ.ವೆಂಕಟೇಶ್ ಅವರು ನೇಮಕವಾಗಿದ್ದಾರೆ. ಅಧ್ಯಕ್ಷರು, ಸದಸ್ಯರ ನೇಮಕದಲ್ಲಿ ಸಾಮಾಜಿಕ ನ್ಯಾಯದ ಜತೆಗೆ ಸೇವಾ ಹಿರಿತನ, ಅರ್ಹತೆ, ಸಾಮರ್ಥ್ಯಕ್ಕೆ ರಾಜ್ಯ ಸರ್ಕಾರ ಆದ್ಯತೆ ನೀಡಿದ್ದು, ಪತ್ರಿಕಾ ಛಾಯಾಗ್ರಾಹಕರನ್ನೂ ಮಾಧ್ಯಮ ಅಕಾಡೆಮಿ ಸದಸ್ಯ ಸ್ಥಾನಕ್ಕೆ ಪರಿಗಣಿಸಿರುವುದೂ ಕೂಡ ಇದೇ ಮೊದಲಾಗಿದೆ.

## ಪರಿಚಯ

ಎಂ.ಎನ್.ಅಹೋಬಲಪತಿ ಅವರು ಮೂಲತ: ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ರಂಗಸಮುದ್ರ ಗ್ರಾಮದವರು. ಇವರು ಪ್ರಾಥಮಿಕ ಶಿಕ್ಷಣವನ್ನು ತಮ್ಮ ಹುಟ್ಟೂರು ರಂಗಸಮುದ್ರದಲ್ಲಿ ಮುಗಿಸಿದರು. ಹನ ಪ್ರೌಡ ಶಾಲಾ ಶಿಕ್ಷಣವನ್ನು ತುಮಕೂರಿನ ನಗರದ ವಾಲ್ಮೀಕಿ (ಗಿಚಿಟಟಬಇಖು) ರೆಸಿಡೆನ್ಸಿಯಲ್ ಶಾಲೆ ನಂತರ ಪಿ.ಯು.ಸಿ ಯನ್ನು ತಮ್ಮ ಹುಟ್ಟೂರು ಪಕ್ಕದಲ್ಲಿರುವ ಕ್ಯಾದಿಗುಂಟೆ ಗ್ರಾಮದಲ್ಲಿ ಮುಗಿಸಿದರು. ಕಷ್ಟಗಳ ನಡುವೆಯೇ ಹೆಚ್ಚಿನ ಅಭ್ಯಾಸ ಮಾಡಬೇಕು ಎಂಬ ಹಂಬಲದೊಂದಿಗೆ ಇವರು ಪದವಿ ಶಿಕ್ಷಣಕ್ಕಾಗಿ ಚಿತ್ರದುರ್ಗದ ಸರ್ಕಾರಿ ಕಲಾ ಕಾಲೇಜಿಗೆ ಇಂಗ್ಲಿಷ್ ಮೇಜರ್ ವಿಭಾಗಕ್ಕೆ ದಾಖಲಾಗಿ ಪದವಿ ಶಿಕ್ಷಣ ಪಡೆದರು.



### ಪ್ರಶಸ್ತಿಗಳು

- ಜಿಲ್ಲಾ ವಾಲ್ಮೀಕಿ ಪ್ರಶಸ್ತಿ
- ರಾಜ್ಯ ಮಟ್ಟದ ಗೂಡಿಹಳ್ಳಿ ನಾಗರಾಜ್ ಪ್ರಶಸ್ತಿ

## ವೃತ್ತಿ ಜೀವನ

ಪ್ರಸ್ತುತ ವಿಜಯ ಕರ್ನಾಟಕ ದಿನಪತ್ರಿಕೆಯ ಚಿತ್ರದುರ್ಗ ಜಿಲ್ಲೆಯ ವಿಶೇಷ ಪ್ರತಿನಿಯಾಗಿ ಕಾರ್ಯನಿರ್ವಹಿಸುತ್ತಿರುವ ಎಂ.ಎನ್. ಅಹೋಬಳಪತಿ ತೊಂಬತ್ತರ ದಶಕದ ಮಧ್ಯಭಾಗದಿಂದ ಚಿತ್ರದುರ್ಗದ ಸುದ್ದಿಗಿಡುಗ ದಿನಪತ್ರಿಕೆ ಪತ್ರಿಕಾ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. 1998 ರ ನಂತರ ಗಣಿ ಕಾರ್ಮಿಕರು, ಆದಿವಾಸಿ, ಗಿರಿಜನ ಹೋರಾಟ, ಕೋಮು ಸೌಹಾರ್ದ ಚಟುವಟಿಕೆಗಳ ಜೊತೆ ಹವ್ಯಾಸಿ ಪತ್ರಕರ್ತರಾಗಿ ದುಡಿದಿದ್ದಾರೆ. ಗೌರಿ ಲಂಕೇಶ್, ಇಂಡಿಯನ್ ಎಕ್ಸ್‌ಪ್ರೆಸ್, ಕನ್ನಡಪ್ರಭ, ಸಂಡೇ ಇಂಡಿಯನ್ ನಲ್ಲಿ ವೃತ್ತಿ ನಿರ್ವಹಿಸಿದ್ದಾರೆ. ಕರ್ನಾಟಕ ಸರ್ಕಾರದ "ಕಣಜ" ಅಂತರ್ಜಾಲ ಜ್ಞಾನಕೋಶದಲ್ಲಿ ಯೋಜನಾ ಸಹಾಯಕರಾಗಿಯೂ ಕೆಲಸ ಮಾಡಿದ್ದಾರೆ. ವಿಜಯ ಕರ್ನಾಟಕದಲ್ಲಿ ವಿಶೇಷ ವರದಿಗಳ ಮೂಲಕ ಗ್ರಾಮೀಣ ಭಾಗದ ರೈತರ, ಕಾರ್ಮಿಕರ, ಪ್ರಚಲಿತ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿ ಜನರ ಧ್ವನಿಯನ್ನು ದಾಖಲಿಸುತ್ತಾ ಬಂದಿದ್ದಾರೆ.

## ಹಾಸ್ಟೆಲ್ ಹೋರಟ ಹಾದಿಯಲ್ಲಿ ಪತ್ರಕರ್ತರನಾಗುವ ಕನಸು

ಭವಿಷ್ಯ ಪತ್ರಕರ್ತ ವೃತ್ತಿ ಆಯ್ಕೆಯನ್ನು ದೊಡ್ಡ ಸವಾಲು ಎಂಬುದನ್ನು ಅರಿತು ತೊಂಬತ್ತರ ದಶಕದ ಮಧ್ಯಭಾಗದಿಂದ ಚಿತ್ರದುರ್ಗದ ಸುದ್ದಿಗಿಡುಗ ಪತ್ರಿಕೆಯಲ್ಲಿ ಪತ್ರಿಕಾ ವೃತ್ತಿ ಆರಂಭಿಸಿದರು.1998 ರ ನಂತರ 2005 ರವರೆಗೆ ನೊಂದ ಸಮುದಾಯದ ಪ್ರತಿನಿಧಿಯಾಗಿ ಕೆಲಸ ಮಾಡಿದರು.ಹೋರಟದ ಕಿಚ್ಚು ಅಡಗಿದ್ದರಿಂದ ಹೋರಾಟಗಾರ ಯುವ ಪತ್ರಕರ್ತ ಎಂ. ಎನ್ ಅಹೋಬಲಪತಿ ಎಂಬ ಖ್ಯಾತಿ ಸಹ ದಶಕಗಳ ಹಿಂದೆ ಲಭಿಸಿತ್ತು.

ಚಿತ್ರದುರ್ಗ ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಹೋರಾಡಿದರು ಪರಿಶಿಷ್ಟ ಜಾತಿ – ಪರಿಶಿಷ್ಟ ಪಂಗಡದ ಮಕ್ಕಳು ಹಾಸ್ಟೆಲ್ ಗಳಲ್ಲಿ ತಿಂಡಿ ಹೋರಾಟ ಮಾಡಿ ಆ ಹೋರಾಟದಲ್ಲಿ ಯಶಸ್ವಿಯಾದರು ಆ ಹೋರಾಟದ ಫಲವಾಗಿ ಎಲ್ಲಾ ಹಾಸ್ಟೆಲ್ ಗಳಲ್ಲಿ ಬೆಳಗಿನ ಉಪಹಾರ ಜಾರಿಯಾಯಿತು. ನೂರಾರು ವಿದ್ಯಾರ್ಥಿಗಳನ್ನ ಜನಪರ ಚಳುವಳಿಗಳಲ್ಲಿ ಭಾಗವಹಿಸಲು ಅಹೋಬಳಪತಿ ಅವರ ಭಾಷಣ ಸಹ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ ಹೋರಟದ ಗುಣವನ್ನು ಮೈಗೂಡಿಸಿಕೊಂಡ ಅಹೋಬಳಪತಿ ಅವರು ತಮ್ಮ ಬದುಕಿನಲ್ಲಿ ಸದಾ ಹೋರಾಟವನ್ನು ಜೀವನದ ಒಂದು ಭಾಗ ಎಂಬಂತೆ ಸವಾಲುಗಳನ್ನು ಸ್ವೀಕರಿಸುತ್ತ ಬೆಳೆದರು.

## ಹೋರಟದ ಹಾದಿ

ಬೆಂಗಳೂರು, ಚಿಕ್ಕಮಗಳೂರು ಚಿತ್ರದುರ್ಗದಲ್ಲಿ ಹೋರಾಟಗಳಲ್ಲಿ ಗುರುತಿಸಿಕೊಂಡಿದ್ದ ಇವರು ಹೋರಾಟಗಾರರ ಕೊಂಡಿಯಾಗಿ ಬೆಳೆದು ನಿಂತರು. ಅಷ್ಟೆಯಲ್ಲದೆ ಚಿನ್ನದ ಗಣಿ ಕಾರ್ಮಿಕರು ಹೋರಾಟ, ಬೆಂಗಳೂರು ಮೈಸೂರ್ ಇಂಫ್ರಾಸ್ಟ್ರಕ್ಚರ್ ಕಾರಿಡಾರ್, ಆದಿವಾಸಿ ಗಿರಿಜನ ಹೋರಾಟ, ಕೋಮು ಸೌಹಾರ್ದ ಚಟುವಟಿಕೆಗಳ ಜೊತೆ ಮಾಡಿದ ಹೋರಟಗಳಲ್ಲಿ ಆಹೋಬಲಪತಿ ಅವರ ಪಾತ್ರ ದೊಡ್ಡದಿದ್ದರು ಎಂದು ಸಹ ಅವರು ಎಲೆಮರೆಯ ಕಾಯಿಯಂತೆ ಹೋರಟಕ್ಕೆ ಫಲ ಹುಡುಕಿದರು.

ರೈತರು, ಕಾರ್ಮಿಕರು ಆದಿವಾಸಿಗಳು ಹಾಗೂ ಮಹಿಳೆಯರ ಪರ ಎರಡು ದಶಕಗಳಿಗೂ ಹೆಚ್ಚು ಕಾಲ ತಮ್ಮನ್ನು ತಾವು ತೊಡಗಿಸಿಕೊಂಡಿದ್ದು, ಸಾಮಾಜಿಕ ಸಮಾನತೆಗಾಗಿ ಅಗಲಿರುಳು ಶ್ರಮಿಸಿ ಹೋರಾಟಗಳನ್ನು ರೂಪಿಸಿದವರು. ಬಡ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕಾಗಿ ಆರ್ಥಿಕ ನೆರವು ಸಂಕಷ್ಟ ಹೇಳಿಕೊಂಡವರಿಗೆ ಸಹಾಯಾಸ್ತ ನೀಡುತ್ತಾ ಬಂದಿದ್ದಾರೆ.

## ಫಾಸ್ಟ್ ನ್ಯೂಸ್

### 12ರಂದು ಪ್ರತಿಭೋತ್ಸವ ಸಮಾರಂಭ

» ಚಿತ್ರದುರ್ಗ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ದಾವಣಗೆರೆ ವಿಶ್ವವಿದ್ಯಾನಿಲಯ, ಚಿತ್ರದುರ್ಗ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಐ.ಕ್ಯೂ.ಎ.ಸಿ ಸಹಯೋಗದಲ್ಲಿ ಇದೇ ಜುಲೈ 12ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ತ.ರಾ.ಸು ರಂಗಮಂದಿರದಲ್ಲಿ ಪ್ರತಿಭೋತ್ಸವ ಸಮಾರಂಭ ಆಯೋಜಿಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅವರು ಮಹಿಳಾ ಸಿರಿ ವಾರ್ಷಿಕ ಸಂಚಿಕೆ ಬಿಡುಗಡೆ ಹಾಗೂ ಬಹುಮಾನ ವಿತರಣೆ ಮಾಡುವರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಮಾರೋಪ ಭಾಷಣ ಮಾಡುವರು. ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಮಹಿಳಾ ಸಿರಿ ವಾರ್ಷಿಕ ಸಂಚಿಕೆ ಸಂಪಾದಕ ಬಿ. ಮಂಜುನಾಥ್, ವಾಣಿಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಸಿ.ಚನ್ನಕೇಶವ, ಸಾಂಸ್ಕೃತಿಕ ಸಮಿತಿ ಸಂಚಾಲಕ ಡಾ.ಡಿ.ಓ.ಸಿದ್ದಪ್ಪ, ಅಧ್ಯಾಪಕರ ಸಂಘದ ಕಾರ್ಯದರ್ಶಿ ಡಾ.ಪಿ.ಎನ್.ಮಧುಸೂದನ್, ಐ.ಕ್ಯೂ.ಎ.ಸಿ ಸಂಚಾಲಕ ಬಿ.ಹೆಚ್.ಕುಮಾರಸ್ವಾಮಿ, ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿ ಎಂ.ಗಿರೀಶ್, ಕ್ರೀಡಾ ಸಮಿತಿ ಸಂಚಾಲಕ ಆರ್.ಶಿವಪ್ರಸಾದ್, ಪತ್ರಾಂಕಿತ ವ್ಯವಸ್ಥಾಪಕ ಆರ್.ವೆಂಕಟೇಶ್ ಉಪಸ್ಥಿತರಿರುವರು. ಬಿ.ಕಾಂ ಉನ್ನತ ಶ್ರೇಣಿ ಪಡೆದ ರುಖಾಯಾ ತಾಜೀಮ್, ಬಿ.ಎ.ಉನ್ನತ ಶ್ರೇಣಿ ಪಡೆದ ಎನ್.ರಕ್ಷಿತ ಅವರಿಗೆ ಸನ್ಮಾನಿಸಲಾಗುವುದು ಎಂದು ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ತಿಳಿಸಿದ್ದಾರೆ.

### ಜುಲೈ 11ರಂದು ವಿಶ್ವ ಜನಸಂಖ್ಯಾ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇದೇ ಜುಲೈ 11ರಂದು ವಿಶ್ವ ಜನಸಂಖ್ಯಾ ದಿನಾಚರಣೆಯ ಅಂಗವಾಗಿ ನಗರದ ಜಿಲ್ಲಾಸ್ಪತ್ರೆಯ ಆವರಣದಲ್ಲಿ ಬೆಳಿಗ್ಗೆ 9.30ಕ್ಕೆ ಜಾಥಾ ಕಾರ್ಯಕ್ರಮ ಹಾಗೂ ತರಾಸು ರಂಗಮಂದಿರದಲ್ಲಿ ಬೆಳಿಗ್ಗೆ 10.30ಕ್ಕೆ ಸಭಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ.ಮಂಜುನಾಥ್‌ಗೆ ಪಿಎಚ್‌ಡಿ ಪದವಿ

» ಚಿತ್ರದುರ್ಗ



ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ವರವು ಗ್ರಾಮದ ಡಿ.ಮಂಜುನಾಥ್ ತಂದೆ ದಾದಯ್ಯ ಅವರಿಗೆ ಕುವೆಂಪು ವಿಶ್ವವಿದ್ಯಾಲಯವು ಮೈಕ್ರೋಬಯಲಾಜಿ ವಿಷಯದಲ್ಲಿ ಪಿಹೆಚ್‌ಡಿ ಪದವಿಗೆ ಅಂಗೀಕರಿಸಿದೆ. ಕುವೆಂಪು ವಿಶ್ವವಿದ್ಯಾಲಯದ ಸೂಕ್ಷ್ಮ ಜೀವವಿಜ್ಞಾನ (ಮೈಕ್ರೋಬಯಲಾಜಿ) ವಿಭಾಗದ ಪ್ರಾಧ್ಯಾಪಕ ಡಾ.ಬಿ.ತಿಪ್ಪೇಸ್ವಾಮಿ ಇವರ ಮಾರ್ಗದರ್ಶನದಲ್ಲಿ ""ಬಯೋಪ್ರೊಸ್ಪೆಕ್ಟಿಂಗ್ ಎಂಡೋಪೆಟಿಕ್ ಫಂಗಿ ಫ್ರಮ್ ಮೆಡಿಸಿನಲ್ ಪ್ಲಾಂಟ್ಸ್ ಆಫ್ ಚಿತ್ರದುರ್ಗ ಜಿಲ್ಲೆ ಕರ್ನಾಟಕ" ( BIOPROSPECTING ENDOPHYTIC FUNGI FROM MEDICINAL PLANTS OF CHITRADURGA DISTRICT KARNATAKA) ಎಂಬ ವಿಷಯದ ಕುರಿತು ಡಿ.ಮಂಜುನಾಥ್ ಅವರು ಮಂಡಿಸಿದ ಸಂಶೋಧನಾ ಪ್ರಬಂಧಕ್ಕೆ ಶಿವಮೊಗ್ಗದ ಕುವೆಂಪು ವಿಶ್ವ ವಿದ್ಯಾನಿಲಯ ಪಿಹೆಚ್‌ಡಿ ಪದವಿ ನೀಡಿದೆ. ಮುಂಬರುವ ಕುವೆಂಪು ವಿಶ್ವವಿದ್ಯಾಲಯದ 34ನೇ ಘಟಿಕೋತ್ಸವದಲ್ಲಿ ಸೂಕ್ಷ್ಮ ಜೀವವಿಜ್ಞಾನದಲ್ಲಿ ಡಿ.ಮಂಜುನಾಥ್ ಪಿಹೆಚ್‌ಡಿ ಪದವಿ ಪ್ರಧಾನ ಮಾಡಲಾಗುವುದು.

# ತುಂಗಾಹಿನ್ನೀರು ಯೋಜನೆಯಡಿ 17.12 ಲಕ್ಷ ಕ್ಷೇತ್ರದ ಜನರಿಗೆ ನೀರಿನ ಸೌಲಭ್ಯ : ಸಚಿವ ಪ್ರಿಯಾಂಕ ಖರ್ಗೆ

» ಚಳ್ಳಕೆರೆ / ಪರಶುರಾಂಪುರ

ಕಳೆದ ಸುಮಾರು ಎರಡು ವರ್ಷಗಳಿಂದ ತುಂಗಾಹಿನ್ನೀರು ಯೋಜನೆಯಡಿ ಕೂಡ್ಲಗಿ, ಚಳ್ಳಕೆರೆ, ಮೊಳಕಾಲ್ಮೂರು, ಪಾವಗಡ ವಿಧಾನಸಭಾ ಕ್ಷೇತ್ರಗಳಿಗೆ ಕುಡಿಯುವ ನೀರು ಒದಿಸುವ ನಿಟ್ಟಿನಲ್ಲಿ ಪೈಪ್‌ಲೈನ್ ಪೂರ್ಣಗೊಂಡಿದ್ದು, ಚಳ್ಳಕೆರೆ ಗಡಿಭಾಗದ ಪಾವಗಡ ತಾಲ್ಲೂಕಿನ ಕೆಂಚಮ್ಮನಹಳ್ಳಿ ಬಳಿ ನೀರು ದಾಸ್ತಾನು ಮಾಡು ಪಾವಗಡ ತಾಲ್ಲೂಕಿಗೆ ವಿತರಣೆ ಮಾಡುವ ಕಾಮಗಾರಿಯನ್ನು ವೀಕ್ಷಿಸಲು ಗ್ರಾಮಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಸಚಿವ ಪ್ರಿಯಾಂಕಖರ್ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪುಟ 2



# ಅಡಿಕೆ ಗಿಡಕ್ಕೆ ಬೆಂಕಿ ಇಟ್ಟ ಕಿಡಿಗೇಡಿಗಳು: ಲಕ್ಷಾಂತರ ರೂ ಮೌಲ್ಯದ ಅಡಿಕೆ ಗಿಡ ಬೆಂಕಿಗೆ ಆಹುತಿ

» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಕೊರ್ಲಕುಂಟೆ ಗ್ರಾಮದ ಕೆ.ವಿ.ಪ್ರಸನ್ನ ಎಂಬುವವರ ಜಮೀನಿಗೆ ಬುಧವಾರ ಮಧ್ಯಾಹ್ನ ತೋಟದಲ್ಲಿದ್ದ ಒಣಹುಲ್ಲಿಗೆ ಯಾರೋ ಕಿಡಿಗೇಡಿಗಳು ಬೆಂಕಿ ಹಚ್ಚಿದ ಪರಿಣಾಮ ಸುಮಾರು 300ಕ್ಕೂ ಅಡಿಕೆ ಗಿಡ ಬೆಂಕಿಗೆ ಸುಟ್ಟು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಪ್ರಸನ್ನರವರ ತೋಟದಲ್ಲಿ ಕಳೆದ ಮೂರು ವರ್ಷಗಳಿಂದ 1300 ಅಡಿಕೆ ಗಿಡಗಳನ್ನು ನೆಡಲಾಗಿತ್ತು. ಬೆಂಕಿಗೆ 300 ಗಿಡಗಳು ಸುಟ್ಟಹೋಗಿವೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ನಿಜಗುಣ, ನಾಗರಾಜ, ಪ್ರವೀಣ್, ಸಂತೋಷ, ಪ್ರಶಾಂತ ಮುಂತಾದವರು ಭೇಟಿ ನೀಡಿ ಬೆಂಕಿ ನಂದಿಸಿರುತ್ತಾರೆ.

## ಪ್ರಮುಖ ಸುದ್ದಿ

### ಮೆರವಣಿಗೆಗೆ ಮೆರಗು ನೀಡಿದ ವಿವಿಧ ಜಾನಪದ ಕಲಾತಂಡಗಳು

# ಕರ್ನಾಟಕ ಜ್ಯೋತಿ ರಥಯಾತ್ರೆಯ ಭವ್ಯ ಮೆರವಣಿಗೆ

» ಚಿತ್ರದುರ್ಗ

ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಧ್ಯೇಯವಾಕ್ಯದೊಂದಿಗೆ ಕರ್ನಾಟಕ ಸಂಭ್ರಮ–50ರ ಅಂಗವಾಗಿ ಕರ್ನಾಟಕ ಜ್ಯೋತಿ ರಥಯಾತ್ರೆಯ ಭವ್ಯ ಮೆರವಣಿಗೆ ಚಿತ್ರದುರ್ಗ ನಗರದಲ್ಲಿ ಬುಧವಾರ ವಿಜೃಂಭಣೆಯಿಂದ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಕನ್ನಡಪರ ಸಂಘಟನೆಗಳು, ಗಣ್ಯರು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳು ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಲ್ಲಿ ಸ್ವಾಗತಿಸಿದರು, ಬಳಿಕ ವಿವಿಧ ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಸಲಾಯಿತು.

ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಭುವನೇಶ್ವರಿ ದೇವಿಗೆ ಪೂಜೆ ಸಲ್ಲಿಸಿ, ಅದ್ದೂರಿ ಮೆರವಣಿಗೆಗೆ ಚಾಲನೆ ನೀಡಿದರು. ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಆರಂಭವಾದ ಮೆರವಣಿಗೆಯು ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿ ವೃತ್ತ, ಎಸ್‌ಬಿಐ ವೃತ್ತ, ಅಂಬೇಡ್ಕರ್ ವೃತ್ತ, ಮದಕರಿ ವೃತ್ತದ ಮಾರ್ಗವಾಗಿ ಒನಕೆ ಓಬವ್ವ ವೃತ್ತದವರೆಗೂ ಸಂಭ್ರಮ, ಸಡಗರದಿಂದ ನಡೆಯಿತು.



ಶಾಸಕಕೆ.ಸಿ.ವೀರೇಂದ್ರಪಪ್ಪಿಮಾತನಾಡಿ, ಮೈಸೂರು ರಾಜ್ಯ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಹಂಪಿಯಲ್ಲಿ ರಥಯಾತ್ರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದರು. ಈಗ ರಥವು ನಮ್ಮ ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ್ದು, ಯಾತ್ರೆಗೆ ಜಿಲ್ಲೆಯಲ್ಲಿ ಕನ್ನಡದ ಮನಸುಗಳು ವಿಜೃಂಭಣೆಯಿಂದ ಸ್ವಾಗತ ನೀಡಿವೆ. ಕರ್ನಾಟಕ ಜ್ಯೋತಿ ರಥಯಾತ್ರೆಯು ಜಿಲ್ಲೆಯಾದ್ಯಂತ ಜುಲೈ 14ರವರೆಗೂ ಸಂಚರಿಸಲಿದೆ ಎಂದು ಹೇಳಿದರು.ಸರ್ಕಾರದ ಆದೇಶದಂತೆ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು ಶೇ.60ರಷ್ಟು ಪ್ರದರ್ಶಿಸುವುದು ಕಡ್ಡಾಯವಾಗಿದ್ದು, ಮುಂದಿನ ದಿನಗಳಲ್ಲಿ ಜಿಲ್ಲಾಡಳಿತ, ನಗರಸಭೆ ಸಹಯೋಗದಲ್ಲಿ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು ಶೇ.60ರಷ್ಟು ಪ್ರದರ್ಶಿಸುವಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮದಾಗಿದೆ ಎಂದರು.ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ತಹಸಿಲ್ದಾರ್ ಡಾ. ನಾಗವೇಣಿ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಯ ಪದಾಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಇದ್ದರು.



### ಕರ್ನಾಟಕ ಜ್ಯೋತಿ ರಥಯಾತ್ರಗೆ ಪುಷ್ಪನಮನ

» ಚಿತ್ರದುರ್ಗ

ಚಿತ್ರದುರ್ಗ ನಗರಕ್ಕೆ ಇಂದು ಆಗಮಿಸಿದ ಕರ್ನಾಟಕ ಜ್ಯೋತಿ ರಥಯಾತ್ರೆಯನ್ನು ಸ್ವಾಗತಿಸಿದ ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ ಕಾರಜೋಳ ರವರು ಕನ್ನಡಾಂಬೆಗೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್‌ರಾದ ಶ್ರೀಮತಿ ನಾಗವೇಣಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಮಲ್ಲಿಕಾರ್ಜುನ್, ಚಿತ್ರಕಲಾವಿದ ನಾಗರಾಜ್ ಬೇದ್ರೇ, ರಂಗಭೂಮಿ ಕಲಾವಿದ ಮುರಾರ್ಜಿ, ಕೆಪಿಎಂ ಗಣೇಶಯ್ಯ, ಆದರ್ಶ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### 11ಕ್ಕೆ ಲೋಕ್ ಅದಾಲತ್, ಜಾಗೃತಿ ಜಾಥಾ

» ದಾವಣಗೆರೆ

ನಗರದ ಬಾಪೂಜಿ ಶೈಕ್ಷಣಿಕ ಸಂಘ, ಆರ್.ಎಲ್. ಕಾನೂನು ಕಾಲೇಜಿನಲ್ಲಿ ಜುಲೈ 11ರಂದು ಬೆಳಿಗ್ಗೆ 10ಕ್ಕೆ ರಾಷ್ಟ್ರೀಯ ಮಟ್ಟದ ಲೋಕ ಅದಾಲತ್ ಜಾಗೃತಿ ಜಾಥಾ 2023-2024ರ ಉದ್ಘಾಟನೆ ನಡೆಯಲಿದೆ. ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ರ್‍ಯಾಲಿಗೆ ಚಾಲನೆ ನೀಡುವರು. ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮಾ.ಕರೆಣ್ಣವರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್ ಕುಮಾರ್, ಆರ್.ಎಲ್. ಕಾನೂನು ಕಾಲೇಜಿನ ಪ್ರಾಚಾರ್ಯ ಡಾ.ಜಿ.ಎಸ್. ಯತೀಶ್, ಪ್ರಿನ್ಸಿಪಾಲ್, ಐಕ್ಯೂಎಸಿ ಸಹ ಸಂಚಾಲಕ ಬಿ.ಪಿ.ಬಸವನಗೌಡ, ಕಾರ್ಯಕ್ರಮದ ಸಂಚಾಲಕ ಟಿ. ವಿದ್ಯಾಧರ ವೇದವರ್ಮ ಆಗಮಿಸಲಿದ್ದಾರೆ.

### ಜಿಟಿಟಿಸಿ ಪ್ರವೇಶಾತಿಗೆ ಅರ್ಜಿ ಆಹ್ವಾನ

» ಚಿತ್ರದುಗ

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ದಲ್ಲಿ 2024-25ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.
ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ (DTDM), ಡಿಪ್ಲೊಮಾ ಇನ್ ಮೆಕಾಟ್ರಾನಿಕ್ಸ್ (ಆಒಅಊ) ಮತ್ತು ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ (DEC) ಕೋರ್ಸ್‌ಗಳ ಪ್ರವೇಶ ಪಡೆಯಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನವಾದ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶ ಪ್ರಕ್ರಿಯೆಯು "ಮೊದಲು ಬಂದವರಿಗೆ ಮೊದಲ ಆದ್ಯತೆಯ" ಮೇರೆಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದೆ.
ಆಸಕ್ತ ಅಭ್ಯರ್ಥಿಗಳು ಪ್ರವೇಶಾತಿಯ ಬಗ್ಗೆ ಚಿತ್ರದುರ್ಗ ನಗರದ ಹಳೆಯ ಬೆಂಗಳೂರು ರಸ್ತೆಯ ಕುಂಚಿಗನಾಳ್ ಕಣಿವೆ ಮಾರಮ್ಮ ದೇವಸ್ಥಾನದ ಹಿಂಭಾಗದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಅಥವಾ ಮೊಬೈಲ್ ಸಂಖ್ಯೆ 9738465834, 9481866855, 9945616114 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ತರಬೇತಿ ಕೇಂದ್ರ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆ ಫಲಿತಾಂಶ ಪ್ರಕಟ

» ದಾವಣಗೆರೆ

2024ರಲ್ಲಿ ನಡೆದ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆ-2 ರ ಫಲಿತಾಂಶ ಪ್ರಕಟವಾಗಿದ್ದು ಜಿಲ್ಲೆಯಲ್ಲಿ ಶೇ.29.73 ಗಂಡು, ಶೇ.44.08 ರಷ್ಟು ಹೆಣ್ಣು ಮಕ್ಕಳು ಉತ್ತೀರ್ಣರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೊಟ್ರೇಶ್.ಜಿ ತಿಳಿಸಿದ್ದಾರೆ.
ತಾಲ್ಲೂಕುವಾರು ವಿವರದನ್ವಯ; ಚನ್ನಗಿರಿ ತಾಲ್ಲೂಕಿನಲ್ಲಿ ಒಟ್ಟು 1135 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು 234 ಗಂಡು, 217 ಹೆಣ್ಣು ಮಕ್ಕಳು ಉತ್ತೀರ್ಣರಾಗಿರುತ್ತಾರೆ. ಹೊನ್ನಾಳಿ ತಾಲ್ಲೂಕಿನಲ್ಲಿ ಒಟ್ಟು 577 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಇದರಲ್ಲಿ 115 ಗಂಡು, 97 ಹೆಣ್ಣು ಮಕ್ಕಳು ಉತ್ತೀರ್ಣ, ಜಗಳೂರು ಒಟ್ಟು 729 ವಿದ್ಯಾರ್ಥಿಗಳು ಪರೀಕ್ಷೆ ಬರೆದು 145 ಗಂಡು, 122 ಹೆಣ್ಣು ಮಕ್ಕಳು, ದಾವಣಗೆರೆ ಉತ್ತರ ಒಟ್ಟು 808 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು 172 ಗಂಡು, 113 ಹೆಣ್ಣು ಮಕ್ಕಳು ಉತ್ತೀರ್ಣರಾಗಿರುತ್ತಾರೆ. ದಾವಣಗೆರೆ ದಕ್ಷಿಣ ಒಟ್ಟು 1008 ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುತ್ತಾರೆ. ಇದರಲ್ಲಿ 193 ಗಂಡು, 156 ಹೆಣ್ಣು ಮಕ್ಕಳು ಉತ್ತೀರ್ಣ, ಹರಿಹರ ಒಟ್ಟು 1114 ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುತ್ತಾರೆ. ಇದರಲ್ಲಿ 170 ಗಂಡು ಹಾಗೂ 137 ಹೆಣ್ಣು ಮಕ್ಕಳು ಉತ್ತೀರ್ಣರಾಗಿರುತ್ತಾರೆ.

### ಸ್ಪರ್ಧಾತ್ಮಕ ಪರೀಕ್ಷೆಗಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಭಾರತ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ಸಹಾಯಕ ಸೆಕ್ಷನ್ ಆಫೀಸರ್, ಲೆಕ್ಕ ಪರಿಶೋಧನಾ ಅಧಿಕಾರಿ, ಲೆಕ್ಕ ಪತ್ರ ಅಧಿಕಾರಿ, ಆದಾಯ ತೆರಿಗೆ, ಕೇಂದ್ರ ಅಬಕಾರಿ ಮತ್ತು ಸಿಬಿಐಯಲ್ಲಿ ಇನ್‌ಸ್ಪೆಕ್ಟರ್, ಇಡಿ ನಲ್ಲಿ ಎಇಓ ಮತ್ತು ಸಿಬಿಐ, ಸಿಬಿಎನ್ ನಲ್ಲಿ ಸಬ್‌ಇನ್‌ಸ್ಪೆಕ್ಟರ್, ಅಂಚೆ ಇಲಾಖೆಯಲ್ಲಿ ಇನ್‌ಸ್ಪೆಕ್ಟರ್, ಹಿರಿಯ ಸೆಕ್ರೆಟರಿಯೇಟ್ ಸಹಾಯಕ, ಅಪ್ಪರ್ ಡಿವಿಜನ್ ಗುಮಾಸ್ತ, ಅಂಚೆ ಇಲಾಖೆ ಸಹಾಯಕ, ವಿಂಗಡನೆ ಸಹಾಯಕ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಹುದ್ದೆಗಳಿಗೆ ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ https://ssc.gov.in or www.ssckkr.kar.nic.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜುಲೈ 24 ಕೊನೆಯದಿನವಾಗಿರುತ್ತದೆ. 18 ರಿಂದ 27 ವರ್ಷವಯೋಮಾನದವರಾಗಿರಬೇಕು. ಎಸ್ಸಿ,ಎಸ್ಟಿ,ಒ.ಬಿ.ಸಿ,ಇ.ಎಸ್.ಎಮ್ ಅಭ್ಯರ್ಥಿಗಳಿಗೆ ನಿಯಾಮಾನುಸಾರ ಇತರ ವಯೋಮಿತಿ ಸಡಿಲಿಕೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ  080-25502520 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದಾವಣಗೆರೆ. ದೂರವಾಣಿ ಸಂಖ್ಯೆ : 08192259446 ಇಲ್ಲಿಗೆ ಸಂಪರ್ಕಿಸಿ.

### ಎಂ.ಕೆ.ಹಟ್ಟಿ ಗ್ರಾ.ಪಂ ಅಧ್ಯಕ್ಷ ಆರ್.ಗಣೇಶ್ ಹೇಳಿಕೆ

# ಸಾಂಕ್ರಾಮಿಕ ರೋಗ ನಿರ್ವಹಣೆಗೆ ಗ್ರಾಪಂ ಸಾಥ್

» ಚಿತ್ರದುರ್ಗ



ಸಾಂಕ್ರಾಮಿಕ ರೋಗ ನಿರ್ವಹಣೆಯಲ್ಲಿ ಗ್ರಾಮ ಪಂಚಾಯಿತಿ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಲಿದೆ ಎಂದು ಎಂ.ಕೆ.ಹಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಆರ್.ಗಣೇಶ್ ಹೇಳಿದರು.

ಇಲ್ಲಿನ ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಬುಧವಾರ ಡೆಂಗ್ಯೂ ಅಡ್ವಕೆಸಿ (ಸಮರ್ಥನಾ) ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ಸಾಂಕ್ರಮಿಕ ರೋಗ ತಡೆಗಟ್ಟಲು ಶುದ್ಧ ಕುಡಿಯುವ ನೀರಿನ ಪೂರೈಕೆ, ಪರಿಸರ ನೈರ್ಮಲ್ಯ ಘನತ್ಯಾಜ್ಯ ಸರಿಯಾದ ವಿಲೇವಾರಿ, ಸೊಳ್ಳೆ ಸಂತಾನೋತ್ಪತ್ತಿ ತಾಣ ನಾಶಪಡಿಸಲು ಗ್ರಾಮ ಪಂಚಾಯಿತಿ ಆರೋಗ್ಯ ಇಲಾಖೆಯೊಂದಿಗೆ ಅಗತ್ಯ ಸಹಕಾರ ನೀಡಲಿದೆ ಎಂದು ಹೇಳಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾಹಿತಿ ಶಿಕ್ಷಣ ನೀಡಿ, ಸಾಂಕ್ರಾಮಿಕ ರೋಗಗಳು ಕಲುಷಿತ ನೀರು ಆಹಾರ ಸೇವನೆಯಿಂದ, ವೈಯಕ್ತಿಕ ಸ್ವಚ್ಛತಾ ಕೊರತೆ, ಕೀಟಗಳಿಂದ ಹರಡುತ್ತವೆ. ಸಾಮಾನ್ಯವಾಗಿ ಸೊಳ್ಳೆಗಳ ಕಡಿತ ಮಲೇರಿಯಾ ಡೆಂಗ್ಯೂ, ಚಿಕನ್ ಗುನಿಯ, ಮೆದುಳ ಜ್ವರ ಹರಡುತ್ತವೆ. ಈಗ ಡೆಂಗ್ಯೂ ಜ್ವರ ರಾಜ್ಯಾದ್ಯಂತ ಹೆಚ್ಚು ಪ್ರಕರಣಗಳು ಕಂಡು ಬಂದಿದೆ. ಚಿತ್ರದುರ್ಗ ನಗರದಲ್ಲಿ ಜುಲೈ-2024 ರಲ್ಲಿ 5 ಪ್ರಕರಣ ಮತ್ತು ಜನವರಿ 2024 ರಿಂದ ಜುಲೈ 10 ರವರೆಗೆ ಒಟ್ಟು 85 ಪ್ರಕರಣಗಳು ವರದಿಯಾಗಿವೆ.

ಯಾವುದೇ ಸಾವು ನೋವು ಸಂಭವಿಸಿರುವುದಿಲ್ಲ. ಈ ಬಗ್ಗೆ ಗ್ರಾಮ ಪಂಚಾಯತಿ ಸದಸ್ಯರು ಮಾಹಿತಿ ಪಡೆದು ನಿಯಂತ್ರಣಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಆರೋಗ್ಯ ಇಲಾಖೆ ಮಾರ್ಗದರ್ಶನದಂತೆ ಪ್ರತಿ ಶುಕ್ರವಾರ ಎಲ್ಲಾ ಮನೆಗಳಲ್ಲಿ ಒಣ ದಿನ ಆಚರಣೆ ಮಾಡುವುದು. ಅಂದರೆ ಶುಕ್ರವಾರದಂದು ಎಲ್ಲಾ ಮನೆಗಳಲ್ಲಿ ನೀರು ಸಂಗ್ರಹಿಸುವ ಪರಿಕರಗಳು ಡ್ರಮ್, ಬ್ಯಾರೆಲ್, ತೊಟ್ಟಿ ಇವುಗಳನ್ನು ಸ್ವಚ್ಛವಾಗಿ ತೊಳೆದು ಒಣಗಿಸಿ ನಂತರ ನೀರು ಸಂಗ್ರಹಿಸಿ ಮುಚ್ಚಳ ಮುಚ್ಚಿ ನೀರು ಸಂಗ್ರಹಿಸುವುದರಿಂದ ಸೊಳ್ಳೆಗಳ ಸಂತಾನೋತ್ಪತ್ತಿ ಕಡಿಮೆಯಾಗುತ್ತದೆ. ಡೆಂಗ್ಯೂ ಪ್ರಕರಣಗಳು ಕಡಿಮೆಯಾಗುತ್ತವೆ ಎಂದರು.

ಪರಿಸರ ಸ್ವಚ್ಛತೆ, ನೈರ್ಮಲ್ಯ ಕಾಪಾಡುವ ಜವಾಬ್ದಾರಿ, ಘನ ತ್ಯಾಜ್ಯ ವಸ್ತುಗಳ ಸರಿಯಾದ ನಿರ್ವಹಣೆಯ ಆರೋಗ್ಯಕರ ಅಭ್ಯಾಸಗಳು ನಿಮ್ಮದಾಗಲಿ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ ರೆಡ್ಡಿ ಮಾತನಾಡಿ, ಸೊಳ್ಳೆಗಳ ಜೀವನ ಚಕ್ರ ಸೊಳ್ಳೆಗಳ ನಿಯಂತ್ರಣದಲ್ಲಿ ಇಲಾಖೆಯಲ್ಲಿ ದೊರೆಯುವ ಸೇವಾ ಸೌಲಭ್ಯಗಳನ್ನು ಸಭೆಯಲ್ಲಿ ವಿವರಿಸಿದರು.

ಇದೇ ಸಂದರ್ಭದಲ್ಲಿ ಡೆಂಗ್ಯೂ ನಿಯಂತ್ರಣ ಮಾಹಿತಿ ಕರಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ವೀರಮ್ಮ, ಪಿ.ಡಿ.ಓ ಸಂತೋಷ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾಗರಾಜ್, ನವೀನ್, ಪ್ರವೀಣ್, ಸಮುದಾಯ ಆರೋಗ್ಯಾಧಿಕಾರಿ ಜಯಲತಾ, ಮಹಿಳಾ ಮಕ್ಕಳ ಇಲಾಖೆಯ ಮೇಲ್ವಿಚಾರಕರಾದ ಮಧುಮಾಲತಿ, ಗ್ರಾಮ ಪಂಚಾಯಿತಿ ಸದಸ್ಯರು, ಸಿಬ್ಬಂದಿ, ಸಾರ್ವಜನಿಕರು ಭಾಗವಹಿಸಿದ್ದರು.

## ತುಂಗಾಹಿನ್ನೀರು ಯೋಜನೆಯಡಿ 17.12 ಲಕ್ಷ ಕ್ಷೇತ್ರದ ಜನರಿಗೆ ನೀರಿನ ಸೌಲಭ್ಯ : ಸಚಿವ ಪ್ರಿಯಾಂಕ ಖರ್ಗೆ

» ಮೊದಲ ಪುಟದಿಂದ



ಅಧಿಕಾರಿಗಳು ಹಾಗೂ ಸಾರ್ವಜನಿಕರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ನೀಡಿದ ಎಲ್ಲಾ ಭರವಸೆಗಳನ್ನು ಈಡೇರಿಸುವಲ್ಲಿಕಟಿಬದ್ಧವಾಗಿದೆ.ತುಂಗಾಹಿನ್ನೀರು ಯೋಜನೆಯಡಿ ನಾಲ್ಕೂ ತಾಲ್ಲೂಕಿನ ಲಕ್ಷಾಂತರ ಜನರಿಗೆ ಕುಡಿಯುವ ನೀರು ಒದಗಿಸುವ ಮಹತ್ವದ ಯೋಜನೆಯಾಗಿದೆ. ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳ್ಳಲಿದ್ದು, ಕೆಲವೇ ದಿನಗಳಲ್ಲಿ ನೀರು ದಾಸ್ತಾನು ಮಾಡಲಾಗುವುದು ಸುಮಾರು 95 ಲಕ್ಷ ಲೀಟರ್ ಸಾಮರ್ಥ್ಯ ನೀರು ಸಂಗ್ರಹ ಮಾಡಿ ವಿತರಣೆ ಮಾಡಲಾಗುವುದು. ಸಧ್ಯದ ಸ್ಥಿತಿಯಲ್ಲಿ ಚಳ್ಳಕೆರೆ ತಾಲ್ಲೂಕಿನಾದ್ಯಂತ ಒಂದೆರಡು ಬಾರಿ ಉತ್ತಮ ಹದ ಮಳೆಯಾಗಿದೆ. ಬಿತ್ತನೆ ಕಾರ್ಯ ಆರಂಭವಾಗಿ ರೈತರು ಕೃಷಿ ಚಟುವಟಿಕೆಯಲ್ಲಿ ನಿರತರಾಗಿದ್ದಾರೆ. ಕುಡಿಯುವ ನೀರು ನೀಡಲು ಈ ಯೋಜನೆ ಸಹಕಾರಿಯಾಗಿದೆ ಎಂದರು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಸಚಿವರು ಇದೇ ಮೊದಲಬಾರಿಗೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರಕ್ಕೆ ಕಾಮಗಾರಿ ಪರಿಶೀಲನೆಗೆ ಆಗಮಿಸಿರುವುದು ಸಂತಸ ತಂದಿದೆ. ತುಂಗಾಹಿನ್ನೀರು ಯೋಜನೆಯಡಿ ಕಾಮಗಾರಿ ಯಶಸ್ವಿಯಾಗಿ ನಡೆದಿದೆ. ಪಾವಗಡ ಕ್ಷೇತ್ರದ ಜನತೆಗೆ ಚಳ್ಳಕೆರೆ ಮೂಲಕವೇ ಕುಡಿಯುವ ನೀರು ಹಾದುಹೋಗಲಿದೆ. ಸರಾಸರಿ ಸುಮಾರು 90 ಲಕ್ಷ ಲೀಟರ್ ನೀರು ದಾಸ್ತಾನು ಮಾಡಿ, ನಂತರ ವಿತರಣೆ ಮಾಡಲಾಗುವುದು. ಜಿಲ್ಲೆಯ ವ್ಯಾಪ್ತಿಯಲ್ಲಿ 1138 ಗ್ರಾಮಗಳು, ಎರಡು ಪಟ್ಟಣದ 17.12 ಲಕ್ಷ ಜನರಿಗೆ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಿದಂತಾಗಿದೆ. ತಾಲ್ಲೂಕಿನ 360, ತುರುವನೂರಿನ 58 ಗ್ರಾಮೀಣ ವಸತಿಪ್ರದೇಶಗಳಿಗೆ ಈ ನೀರಿನ ಸೌಲಭ್ಯ ದೊರಕಲಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ, ಸಹಾಯಕ ಕಾರ್ಯಪಾಲಕ ಅಭಿಯಂತರ ದಯಾನಂದಸ್ವಾಮಿ, ಸಹಾಯಕ ಇಂಜಿನಿಯರ್ ತಿಪ್ಪೇಸ್ವಾಮಿ, ಇಒ ಶಶಿಧರ, ಮುಖಂಡರಾದ ರವಿಕುಮಾರ್, ವೀರಭದ್ರಪ್ಪ, ಶಶಿಧರ, ರಮೇಶ್‌ಗೌಡ, ರಾಘವೇಂದ್ರ, ನರಸಿಂಹಮೂರ್ತಿ,ದೇವರಾಜು ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ತಾಲೂಕಿನ ಕೊರ್ಲಕುಂಟೆ ಗ್ರಾಮದ ರೈತ ಕೆ.ವಿ. ಪ್ರಸನ್ನ ಎಂಬುವರ ಅಡಕೆ ತೋಟಕ್ಕೆ ಬುಧವಾರ ಬೆಂಕಿ ಹತ್ತಿಕೊಂಡ ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುತ್ತಿರುವುದು.

## ಪರಿಸರ ಸಂರಕ್ಷಣೆಗೆ ಮುಂದಾಗಿ: ಎ.ಮುರಳಿ



» ಚಿತ್ರದುರ್ಗ

ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಪರಿಸರ ಸಂರಕ್ಷಣೆಗಾಗಿ ಜಿಲ್ಲೆಯಲ್ಲಿ ದೊಡ್ಡ ಮಟ್ಟದಲ್ಲಿ ಸಸಿಗಳನ್ನು ನೆಡಬೇಕಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ ಕರೆ ನೀಡಿದರುನಗರದ ಸದಾನಂದ ಬಡಾವಣೆಯ ತ್ರಿಶೂಲ್ ಆಂಜನೇಯ ದೇವಸ್ಥಾನದ ಅವರಣದಲ್ಲಿ ಪಕ್ಷದ ಸಂಸ್ಥಾಪಕ ಶ್ಯಾಂ ಪ್ರಕಾಶ್ ಮುಖರ್ಜಿ ಪುಣ್ಯದಿನದ ಅಂಗವಾಗಿ ಸಸಿ ನೆಟ್ಟು ಮಾತನಾಡಿದರು.ದೇಶಾದ್ಯಂತ ಕಾರ್ಯಕರ್ತರು ತಮ್ಮ ತಾಯಿಯ ಹೆಸರಲ್ಲಿ ಒಂದೊಂದು ಗಿಡ ನೆಡಬೇಕಾಗಿದೆ ಎಂದು ಪ್ರದಾನಿ ಮೋದಿಯವರು ಕರೆ ನೀಡಿದ್ದಾರೆ. ಹಾಗಾಗಿ ಪಕ್ಷದ ಪೇಜ್ ಪ್ರಮುಖರು ಬೂತ್ ಅಧ್ಯಕ್ಷರು, ಶಕ್ತಿ ಕೇಂದ್ರ ಪ್ರಮುಖರು, ಮಂಡಲ ಅಧ್ಯಕ್ಷರು ಹಾಗೂ ಜಿಲ್ಲಾ ಪದಾಧಿಕಾರಿಗಳು ತಮ್ಮ ಕ್ಷೇತ್ರಗಳಲ್ಲಿ ತಮ್ಮ ತಾಯಿಯ ಜೊತೆ ಗಿಡ ನೆಡುವ ಕಾರ್ಯ ಮಾಡಬೇಕು ಎಂದರು.ಬಿಜೆಪಿ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ನಗರ ಅಧ್ಯಕ್ಷ ನವೀನ್ ಚಾಲುಕ್ಯ, ಜಿಲ್ಲಾ ಮಾದ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ಹಿರಿಯ ಮುಖಂಡ ಶಿವಣ್ಣಚಾರ್, ಪ್ರಕಾಶ್, ಪ್ರಮುಖರಾದ ಕುಮಾರ್, ಲಿಂಗಯ್ಯ, ಶಿವಮೂರ್ತಿ, ರಂಗಣ್ಣ, ರಾಜೇಶ್ವರಿ ಸಾರಂಗ ಮಠ, ವೀರಭದ್ರಪ್ಪ, ಶೋಭಮ್ಮ, ಶ್ರಿನಿವಾಸ, ಮಲ್ಲಿಕಾರ್ಜುನ್, ಶಿವಕುಮಾರ್, ಅಜಿತ್, ಸಾಗರ್, ಪ್ರವೀಣ್, ಲೋಕೇಶ್ ಸಾರಂಗ ಮಠ ಇದ್ದರು.

## ಮೆಕ್ಕೆಜೋಳಕ್ಕೆ ಲದ್ದಿಹುಳು ಬಾದೆ, ನಿಯಂತ್ರಣಕ್ಕೆ ಕೀಟನಾಶಕ ಸಿಂಪರಣೆಗೆ ಸಲಹೆ

» ದಾವಣಗೆರೆ

ಜಿಲ್ಲೆಯಲ್ಲಿ ಮೆಕ್ಕೆಜೋಳ ಬೆಳೆಗೆ ಸೈನಿಕ ಹುಳಗಳ ಬಾದೆ ಹೆಚ್ಚಳವಾಗಿದ್ದು ನಿರ್ವಹಣೆಗೆ ಇಮಾಮ್ಯಾಕ್ಟಿನ್ ಬೆಂಜೋಯೇಟ್ ಕೀಟನಾಶಕವನ್ನು ಪ್ರತಿ ಲೀಟರ್ ನೀರಿಗೆ ಅರ್ಧ ಗ್ರಾಂ ಬೆರೆಸಿಸುಳಿಯಲ್ಲಿ ತುಂಬುವಂತೆ ಸಿಂಪರಣೆ ಮಾಡಲು ತಿಳಿಸಲಾಗಿದೆ. ಕೀಟಾ ನಾಶಕವು ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಮತ್ತು ಪರವಾನಿಗೆ ಪಡೆದ ಅಧಿಕೃತ ಕೃಷಿ ಪರಿಕರ ಮಾರಾಟಗಾರರಲ್ಲಿ ಕೂಡ ಲಭ್ಯವಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಅಧಿಕಾರಿಗಳ ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ತಿರುಪತಿ ಪಾಟೀಲ್ ಮಾಹಿತಿ

# ಜು.14 ರಂದು ಹೊಸದುರ್ಗಕ್ಕೆ ಕನ್ನಡ ಜ್ಯೋತಿ ರಥಯಾತ್ರೆ

» ಹೊಸದುರ್ಗ




ಸರ್ಕಾರದ ಆದೇಶದಂತೆ ಕರ್ನಾಟಕ ಸಂಭ್ರಮಾಚರಣೆ 50 ರ ಹಿನ್ನೆಲೆಯಲ್ಲಿ ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ ಎಂಬ ಧ್ಯೇಯ ವಾಕ್ಯದಡಿ ರಾಜ್ಯದ್ಯಂತ ಕನ್ನಡ ಜ್ಯೋತಿ ರಥವು ರಾಜ್ಯಾದ್ಯಂತ ಸಂಚರಿಸುತ್ತಿದ್ದು, ಇದೇ ಜುಲೈ ತಿಂಗಳ 14 ರಂದು ಹೊಸದುರ್ಗ ತಾಲೂಕಿಗೆ ಬರಲಿದೆ. ನನ್ನೆಲ್ಲಾ ಕನ್ನಡಿಗರು ಮತ್ತು ಕನ್ನಡಾಭಿಮಾನಿಗಳು ಒಂದುಗೂಡಿ ರಥಾಯಾತ್ರೆಯನ್ನು ಸಂಭ್ರಮದಿಂದ ಬರಮಾಡಿಕೊಳ್ಳೋಣ ಎಂದು ತಹಶೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಕನ್ನಡ ಜ್ಯೋತಿ ರಥಯಾತ್ರೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾರ್ಗಸೂಚಿಯಂತೆ ಸೂಕ್ತ ಭದ್ರತೆ ಮತ್ತು ಗೌರವದೊಂದಿಗೆ ಸ್ವಾಗತಿಸಲಾಗುವುದು. 14 ರ ಬೆಳಿಗ್ಗೆ ಹಿರಿಯೂರಿನಿಂದ ತಾಲೂಕಿನ ಲಕ್ಕಿಹಳ್ಳಿ ಬಸ್ ನಿಲ್ದಾಣಕ್ಕೆ ರಥ ಬರಲಿದ್ದು, ಸಂಭ್ರಮದಿಂದ ಸ್ವಾಗತ ಮಾಡಿಕೊಳ್ಳಲಾಗುವುದು. ನಂತರ ಅಲ್ಲಿಂದ ಮಾಡದಕೆರೆ ಮಾರ್ಗವಾಗಿ ಹೊಸದುರ್ಗ ಪಟ್ಟಣಕ್ಕೆ ಕರೆತರಲಾಗುವುದು. ನಂತರ ಪಟ್ಟಣದಲ್ಲಿ ಶಾಸಕರು, ಪುರಸಭಾ ಸದಸ್ಯರು, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರು, ಸದಸ್ಯರು, ಕನ್ನಡಪರ ಸಂಘಟನೆಗಳ ಅಧ್ಯಕ್ಷರು, ಸದಸ್ಯರು ಮತ್ತು ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು, ಉಪನ್ಯಾಸಕರು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾವಿರಾರು ಕನ್ನಡಾಭಿಮಾನಿಗಳು ಈ ರಥಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಕರ್ನಾಟಕದ ಇತಿಹಾಸ, ಕನ್ನಡ ಭಾಷೆಯ ಮಹತ್ವ, ಬೆಳೆದು ಬಂದ ಬಗೆ, ಹಿನ್ನೆಲೆ ಹಾಗೂ ನಾಡು-ನುಡಿಯ ಸುದೀರ್ಘ ಪರಂಪರೆಯ ಬಗ್ಗೆ ನಾಡಿನ ಜನರಲ್ಲಿ ಅರಿವು ಮೂಡಿಸುವ ಸದುದ್ದೇಶ ಹಾಗೂ ಕರ್ನಾಟಕ ಸಂಭ್ರಮ 50ರ ನೆನಪಿಗಾಗಿ ಈ ರಥಯಾತ್ರೆಯು ನಡೆಯುತ್ತಿದ್ದು, ಬಹಳ ಹೆಮ್ಮೆಯ ವಿಚಾರವಾಗಿದೆ. ಈಗಾಗಲೇ, ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಈ ಕಾರ್ಯಕ್ರಮಕ್ಕೆ ಎಲ್ಲಾ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಪ್ಪದೇ ಕಡ್ಡಾಯವಾಗಿ ಹಾಜರಿರಬೇಕೆಂದು ಸೂಚಿಸಿದರು.

ಈ ವೇಳೆ ಸಭೆಯಲ್ಲಿ ತಾ.ಪಂ. ಇಒ ಸುನಿಲ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಓಂಕಾರಪ್ಪ, ಕನ್ನಡ ರಕ್ಷಣಾ ವೇದಿಕೆ ಅಧ್ಯಕ್ಷ ಲೋಕೇಶ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕಾಳಮ್ಮ, ಸಹಾಯಕ ಕೃಷಿ ನಿರ್ದೇಶಕ ಈಶ ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಕನ್ನಡಪರ ಸಂಘಟನೆಗಳ ಸದಸ್ಯರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಕಾಯಕ ರತ್ನ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆ

» ಚಿತ್ರದುರ್ಗ



ಕರ್ನಾಟಕರಾಜ್ಯವೈಜ್ಞಾನಿಕಸಂಶೋಧನಾಪರಿಷತ್ ಬೆಂಗಳೂರು ಜಿಲ್ಲಾ ಶಾಖೆ ಚಿತ್ರದುರ್ಗ ವತಿಯಿಂದ ಕಾಯಕ ರತ್ನ ರಾಜ್ಯ ಮಟ್ಟದ ಪ್ರಶಸ್ತಿಗೆ ಚಿತ್ರದುರ್ಗ ಕೋಟೆ ವಾಯುವಿಹಾರಿಗಳ ಸಂಘದ ಅಧ್ಯಕ್ಷ ಆರ್.ಸತ್ಯಣ್ಣ ಇವರನ್ನು ಆಯ್ಕೆ ಮಾಡಲಾಗಿದೆ.ಬೀದರ್‌ನ ಡಾ.ಚನ್ನಬಸವ ಪಟ್ಟ ದೇವರ ರಂಗಮಂದಿರದಲ್ಲಿ ಜು.13 ರಂದು ಬೆಳಿಗ್ಗೆ 10-30 ಕ್ಕೆ ಆರ್.ಸತ್ಯಣ್ಣನವರಿಗೆ ಕಾಯಕ ರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು. ಕೋಟೆ ವಾಯು ವಿಹಾರಿಗಳ ಸಂಘದ ಅಧ್ಯಕ್ಷರಾಗಿ ಕಳೆದ ಹತ್ತು ವರ್ಷಗಳಿಂದಲೂ ಸೇವೆ ಸಲ್ಲಿಸುತ್ತಿದ್ದು, ಕೋಟೆ ಸ್ಮಾರಕ ರಕ್ಷಣಾ ವೇದಿಕೆ ಖಜಾಂಚಿಯಾಗಿ, ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಗೌರವಾಧ್ಯಕ್ಷರಾಗಿರುವ ಆರ್.ಸತ್ಯಣ್ಣ ಅನೇಕ ಸಮಾಜಮುಖಿ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಹಿರಿಯ ನಾಗರೀಕರಿಗೆ ಕೋಟೆಯಲ್ಲಿ ಸಂಜೆ ವಾಯುವಿಹಾರಕ್ಕೆ ಅವಕಾಶ ಕಲ್ಪಿಸಲು ಪುರಾತತ್ವ ಇಲಾಖೆ ಅಧಿಕಾರಿಗಳ ಜೊತೆ ಚರ್ಚಿಸಿ ಅವಕಾಶ ಕಲ್ಪಿಸುವಲ್ಲಿ ಯಶಸ್ವಿಯಾಗಿದ್ದಾರೆ. ಐತಿಹಾಸಿಕ ಚಿತ್ರದುರ್ಗದ ಕೋಟೆಯನ್ನು ವಿಶ್ವಪರಂಪರೆ ಪಟ್ಟಿಗೆ ಸೇರಿಸುವಂತೆ ಕೋಟೆಗೆ ಭೇಟಿ ನೀಡಿದ್ದ ಹಿಂದಿನ ಜಿಲ್ಲಾಧಿಕಾರಿ ವಿನೋತ್‌ಪ್ರಿಯ ಹಾಗೂ ಕೇಂದ್ರ ಸಚಿವರ ಗಮನ ಸೆಳೆದಿದ್ದಾರೆ. ಕೋಟೆಗೆ ಬರುವ ಪ್ರವಾಸಿಗರಿಗೆ ಪ್ರಕೃತಿ ಕರೆಗೆ ತೊಂದರೆಯಾಗಬಾರದೆಂದು ಶೌಚಾಲಯ ನಿರ್ಮಾಣದಲ್ಲಿ ಇವರ ಪಾತ್ರವಿದೆ. ಕೋಟೆಯಲ್ಲಿರುವ ನವಿಲುಗಳಿಗೆ ಹತ್ತಾರು ವರ್ಷಗಳಿಂದಲೂ ಪಡಿತರ ಧಾನ್ಯಗಳನ್ನು ಸ್ವಂತ ಖರ್ಚಿನಿಂದ ಪೂರೈಸುತ್ತಿದ್ದಾರೆ. ಇವರ ಅಳಿಲು ಸೇವೆಯನ್ನು ಗುರುತಿಸಿ ಕಾಯಕ ರತ್ನ ಪ್ರಶಸ್ತಿಯನ್ನು ನೀಡಲಾಗುತ್ತಿದೆ.ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಜಿಲ್ಲಾ ಶಾಖೆಯ ಎಲ್ಲಾ ಸದಸ್ಯರುಗಳು ತೆರಳುತ್ತಿದ್ದು, ಆರ್.ಸತ್ಯಣ್ಣನವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಪರಿಷತ್‌ನ ಜಿಲ್ಲಾಧ್ಯಕ್ಷ ನಾಗರಾಜ್ ಸಂಗಮ್ ಮನವಿ ಮಾಡಿದ್ದಾರೆ.ಹೆಚ್ಚಿನ ಮಾಹಿತಿಗಾಗಿ ಮೊ : 8747825425 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

### ಮಕ್ಕಳ ಪ್ರವೇಶಕ್ಕೆ ಅಹ್ವಾನ

» ದಾವಣಗೆರೆ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ನಡೆಯುತ್ತಿರುವ ವಸತಿ ಶಾಲೆಗಳಿಗೆ 6 ನೇ ತರಗತಿಗೆ ಶೇ 10 ರಷ್ಟು ಮೀಸಲಿರಿಸಿ ವಿಶೇಷ ವರ್ಗಗಳ ಅಡಿಯಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಸಫಾಯಿ ಕರ್ಮಚಾರಿ, ಗುರುತಿಸಲ್ಪಟ್ಟ ಮ್ಯಾನುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳು ಮತ್ತು ಮೊಮ್ಮಕ್ಕಳು, ಪೌರ ಕಾರ್ಮಿಕ, ಚಿತಾಗಾರದ ಕಾರ್ಮಿಕರ ಮಕ್ಕಳು, ಸ್ಮಶಾನ ಕಾರ್ಮಿಕರ ಮಕ್ಕಳು, ಬಾಲ ಕಾರ್ಮಿಕರು, ಜೀತ ವಿಮುಕ್ತ ಕಾರ್ಮಿಕರ ಮಕ್ಕಳು, ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು,ಶೇ. 25 ಗಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು, ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು, ಏಕ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು, ಗುರುತಿಸಿರುವ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ, ಅತೀ ಸೂಕ್ಷ್ಮ ಸಮುದಾಯದ, ಸೈನಿಕರು ಮತ್ತು ಮಾಜಿ ಸೈನಿಕರು, ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು ಪ್ರವೇಶ ಪಡೆಯಬಹುದಾಗಿದೆ. ಜಿಲ್ಲೆಯಲ್ಲಿ 22 ವಸತಿ ಶಾಲೆಗಳಿದ್ದು ಈ ವಸತಿ ಶಾಲೆಗಳಿಗೆ ಆನ್‌ಲೈನ್ ಮೂಲಕ http://cetonline.karnataka.goc.in/kreis24d ಲಿಂಕ್ ಬಳಸಿ ಅರ್ಜಿ ಸಲ್ಲಿಸಬಹುದು. ವಿಶೇಷ ವರ್ಗದ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನಲ್ಲಿ 6ನೇ ತರಗತಿಯಲ್ಲಿ ಓದುತ್ತಿದ್ದಲ್ಲಿ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ದೃಢೀಕರಿಸಿ ಕಚೇರಿಗೆ ಅಥವಾ ಹತ್ತಿರದ ವಸತಿ ಶಾಲೆ(ಪ.ಜಾತಿ,ಪ.ಪಂ,ಹಿ.ವರ್ಗ) ಪ್ರಾಂಶುಪಾಲರನ್ನು ಸಂಪರ್ಕಿಸಿ ಪ್ರವೇಶ ಪಡೆಯಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ನಾಗರಾಜ ತಿಳಿಸಿದ್ದಾರೆ.

### ಶಿಷ್ಯವೇತನಕ್ಕಾಗಿ ಅರ್ಜಿ

» ದಾವಣಗೆರೆ

ಕರ್ನಾಟಕದ ಮಾಜಿ ಸೈನಿಕರ ಹಾಗೂ ಹೊರರಾಜ್ಯದ ಮಿಲಿಟರಿ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ (ಅಧಿಕಾರಿಗಳನ್ನು ಹೊರತುಪಡಿಸಿ) ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಂದನೇ ತರಗತಿಯಿಂದ ಪಿ.ಯು.ಸಿ ವರೆಗೆ ಓದುವ ಮಕ್ಕಳಿಗೆ ಪುಸ್ತಕ ಅನುದಾನಕ್ಕಾಗಿ ಮತ್ತು ಪದವಿ, ಡಿಪ್ಲೋಮಾ ಜೆ.ಓ.ಸಿ ವೃತ್ತಿಪರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಶುಲ್ಕ ರಹಿತ ಅರ್ಜಿಗಳನ್ನು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆಪ್ಟಂಬರ್ 30 ರೊಳಗಾಗಿ ಯಾವ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವರೊ ಆ ಜಿಲ್ಲೆಗೆ ಸಂಬಂಧಿಸಿದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಕಚೇರಿಯ ದೂ.ಸಂ: 08182-220925 ಗೆ ಸಂಪರ್ಕಿಸಬೇಕೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರಾದ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

### ಸ್ಥಳೀಯರಿಗೆ ಉದ್ಯೋಗ ಸ್ಥಳೀಯ ಪ್ರದೇಶಾಭಿವೃದ್ಧಿಗೆ ಕೊಡುಗೆ ನೀಡಲಿ: ಸಂಸದ

# ಖಾಸಗಿ ಗಣಿ ಕಂಪನಿಗಳು ಸಾಮಾಜಿಕ ಹೊಣೆಗಾರಿಕೆ ಪ್ರದರ್ಶಿಸಲಿ: ಕಾರಜೋಳ

» ಚಿತ್ರದುರ್ಗ

ಜಿಲ್ಲೆಯ ಗಣಿ ಸಂಪತ್ತು ಬಳಸಿ ವ್ಯಾಪಾರ ವಹಿವಾಟು ನಡೆಸುತ್ತಿರುವ ಖಾಸಗಿ ಗಣಿ ಕಂಪನಿಗಳು ಸಾಮಾಜಿಕ ಹೊಣೆಗಾರಿಕೆಯನ್ನು ಪ್ರದರ್ಶಿಸಬೇಕು. ಸ್ಥಳೀಯರಿಗೆ ಉದ್ಯೋಗ ಅವಕಾಶ ನೀಡುವುದರ ಜೊತೆಗೆ ಸ್ಥಳೀಯ ಪ್ರದೇಶಾಭಿವೃದ್ಧಿಗೂ ಕೊಡುಗೆ ನೀಡಬೇಕು ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಮುಖವಾಗಿ 8 ಖಾಸಗಿ ಗಣಿ ಕಂಪನಿಗಳಿಗೆ ಗುತ್ತಿಗೆ ನೀಡಲಾಗಿದೆ. ಇದರಲ್ಲಿ 5 ಕಂಪನಿಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲೆಯ ಗಣಿ ಸಂಪತ್ತು ಬಳಿಸಿ ಲಾಭ ಗಳಿಸುತ್ತಿರುವ ಕಂಪನಿಗಳು ಜಿಲ್ಲೆಯ ಅಭಿವೃದ್ಧಿಗೆ ಕೊಡುಗೆ ನೀಡುವುದು ಅಗತ್ಯವಾಗಿದೆ. ಗಣಿ ಮತ್ತು ಅದಿರು ನಿಯಂತ್ರಣ ಅಭಿವೃದ್ಧಿ ನಿಯಮಗಳ ಕಾಯ್ದೆ ಅನುಸಾರ ಗಣಿ ಕಂಪನಿಗಳಿಗೆ ಗುತ್ತಿಗೆ ನೀಡುವ ಸಂದರ್ಭದಲ್ಲಿಯೇ ಸ್ಥಳೀಯ ಪ್ರದೇಶ ಹಾಗೂ ಜನರ ಅಭಿವೃದ್ಧಿ ಕಾರ್ಯನಿರ್ವಹಿಸುವ ನಿಬಂಧನೆ ವಿಧಿಸಲಾಗಿರುತ್ತದೆ. ಸ್ಥಳೀಯ ಭೂಮಿ, ವಿದ್ಯುತ್, ರಸ್ತೆ, ಸಂಪತ್ತು, ಮೂಲಭೂತ ಸೌಕರ್ಯಗಳನ್ನು ಬಳಸಿ ಗಣಿಗಾರಿಕೆ ನಡೆಸುವ ಕಂಪನಿಗಳು ಸ್ಥಳೀಯ ಜನರಿಗೆ ಉದ್ಯೋಗ ನೀಡದೇ ಹೋದರೆ ಹೇಗೆ? ಸಾವಿರಾರು ಜನರು ಅದರಲ್ಲೂ ಯುವಜನರು ಉದ್ಯೋಗ ಅರಸಿಕೊಂಡು ಜಿಲ್ಲೆಯಿಂದ ಬೆಂಗಳೂರು, ಮಂಗಳೂರು, ಗೋವಾಗೆ ಗುಳೆ ಹೋಗುತ್ತಾರೆ. ಜಿಲ್ಲೆಯ ಸಂಪತ್ತು ಜನರಿಗೆ ಉಪಯೋಗವಾಗದಿದ್ದರೆ ಹೇಗೆ? ಗಣಿ ಕಂಪನಿಗಳು ಕೇವಲ ರಾಜ್ಯದ ಬೊಕ್ಕಸಕ್ಕೆ ತೆರಿಗೆ ನೀಡಿದರೆ ಸಾಲದು. ಸ್ಥಳೀಯ ಜನರ ಅಭಿವೃದ್ಧಿಗೂ ಕೊಡುಗೆ ನೀಡಬೇಕು ಎಂದು ಸಂಸದ ಗೋಂವಿದ ಎಂ ಕಾರಜೋಳ ಹೇಳಿದರು.



ಇದರೊಂದಿಗೆ ಗಣಿ ಬಾಧಿತ ಪ್ರದೇಶದ ಅಭಿವೃದ್ಧಿಗೂ ಕಾನೂನು ರೂಪಿಸಲಾಗಿದೆ. ಗಣಿಗಾರಿಕೆಯಿಂದ ಉಂಟಾದ ಪ್ರಕೃತಿ ಹಾನಿಯನ್ನು ಸಮತೋಲನಗೊಳಿಸಲು ಸಹ ಗಣಿ ಕಂಪನಿಗಳು ಸರಿಯಾದ ಕೆಲಸ ಮಾಡಬೇಕು. ಗಣಿ ಕಂಪನಿಗಳ ಸಿ.ಎಸ್.ಆರ್ (ಸಾಮಾಜಿಕ ಹೊಣೆಗಾರಿಕೆ) ನಿಧಿಯಲ್ಲಿ ಸಂಗ್ರಹವಾದ ಹಣವೆಷ್ಟು? ಈ ಹಣವನ್ನು ಎಲ್ಲಿ ಬಳಕೆ ಮಾಡಲಾಗಿದೆ? ಗಣಿ ಕಂಪನಿಗಳು ಕಾರ್ಪೋರೇಟ್ ಕಚೇರಿಗಳನ್ನು ಮುಂಬಯಿ, ದೆಹಲಿ ಅಥವಾ ದೂರುದ ಊರುಗಳಲ್ಲಿ ಸ್ಥಾಪಿಸಿ, ಅಲ್ಲಿ ಸಿ.ಎಸ್.ಆರ್. ನಿಧಿ ಬಳಕೆ ಮಾಡುವುದು ತರವಲ್ಲ. ಸ್ಥಳೀಯ ಜನರು ಹಾಗೂ ಪ್ರದೇಶ ಅಭಿವೃದ್ಧಿ ಬಳಸಬೇಕು. ಕುಡಿಯುವ ನೀರು, ಶಾಲೆ-ಕಾಲೇಜು, ರಸ್ತೆ, ಕೆರೆ ಕಟ್ಟೆಗಳ ನಿರ್ಮಾಣಕ್ಕೆ ಗಣಿ ಕಂಪನಿಗಳು ಕೊಡುಗೆ ನೀಡಬೇಕು ಎಂದರು.

ಗಣಿ ಅಧಿಕಾರಿಗಳು ರಾಜಸ್ವ ಬೊಕ್ಕಸಕ್ಕೆ ಹಣ ತುಂಬವ ಕೆಲಸ ಮಾಡುವದರ ಜೊತೆಗೆ ಗಣಿ ಕಂಪನಿಗಳ ಸಿ.ಎಸ್.ಆರ್. ನಿಧಿ ಬಳಕೆ ಕುರಿತು ನಿಗಾ ವಹಿಸಬೇಕು. ಮುಂದಿನ ಸಭೆಯಲ್ಲಿ ಜಿಲ್ಲೆಯ ಎಲ್ಲಾ ಗಣಿ ಕಂಪನಿಗಳ ಮುಖ್ಯಸ್ಥರು ಸಿ.ಎಸ್.ಆರ್. ನಿಧಿ ಬಳಕೆ ಕುರಿತು ಸಂಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಭಾಗವಹಿಸುವಂತೆ ಸೂಚನೆ ನೀಡಬೇಕು ಎಂದು ಸಂಸದ ಗೋವಿಂದ ಎಂ ಕಾರಜೋಳ ಗಣಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಕೆಎಂಇಆರ್‌ಸಿ ನಿಧಿ ಬಳಕೆಗೆ ಒತ್ತು:** ಜಿಲ್ಲೆಗೆ ಕೆಎಂಇಆರ್‌ಸಿ ಅಡಿ ರೂ.3792 ಕೋಟಿ ಅನುದಾನ ಲಭ್ಯವಿದ್ದು, ಇದನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಜಿಲ್ಲೆಯ ಗಣಿ ಭಾಧಿತ ಪ್ರದೇಶಗಳು ಹಾಗೂ ಇತರೆ ಸ್ಥಳಗಳಲ್ಲಿಯೂ ಅಭಿವೃದ್ಧಿ ಮಾಡಲು ಒತ್ತು ನೀಡಲಾಗುವುದು. ಕೆಎಂಇಆರ್‌ಸಿ ನಲ್ಲಿ ಪರಿಸರ ಪುನರ್‌ಸ್ಥಾಪನೆಗೆ 555.64 ಕೋಟಿ ರೂ., ಕೃಷಿ ಆಧಾರಿತ ಚಟುವಟಿಕೆಗೆ -391.04 ಕೋಟಿ ರೂ., ಕುಡಿಯುವ ನೀರು, ನೈರ್ಮಲ್ಯ, ಗ್ರಾಮೀಣ ರಸ್ತೆ-978.68 ಕೋಟಿ, ಆರೋಗ್ಯ ಕ್ಷೇತ್ರ -255.94 ಕೋಟಿ, ಶಿಕ್ಷಣ-330.58 ಕೋಟಿ, ವಸತಿ-106.88 ಕೋಟಿ, ರಸ್ತೆ ಹಾಗೂ ಸಂಪರ್ಕ ವ್ಯವಸ್ಥೆ-620.2 ಕೋಟಿ, ನೀರಾವರಿ-154.70 ಕೋಟಿ ರೂ. ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯ ಚಟುವಟಿಕೆಗಳಿಗಾಗಿ ಒಟ್ಟು 3792. 30 ಕೋಟಿ ರೂ. ನಿಧಿಯನ್ನು ಹಂಚಿಕೆ ಮಾಡಿ ವಿವಿಧಅಭಿವೃದ್ಧಿಕಾರ್ಯಕೈಗೊಳ್ಳಬಹುದು. ಈ ಕುರಿತು ರೂಪಿಸಲಾಗಿರುವ ಕ್ರಿಯಾ ಯೋಜನೆಯನ್ನು ಮುಂದಿನ ಸಭೆಯಲ್ಲಿ ಮಂಡಿಸಿ, ಅಗತ್ಯವಿದ್ದಲ್ಲಿ, ಕ್ರಿಯಾಯೋಜನೆಯಲ್ಲಿ ಬದಲಾವಣೆಗೆ ಕ್ರಮ ಕೈಗೊಳ್ಳಬೇಕು ಎಂದು ಗಣಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಬಳಿ ಜಿಲ್ಲೆಯ ಕುರಿತು ಚರ್ಚಿಸಿದ್ದೇನೆ. ಅವರ ಸಮ್ಮುಖದಲ್ಲಿಯೇ ಎಲ್ಲಾ ಗಣಿ ಕಂಪನಿಗಳ ಮುಖ್ಯಸ್ಥರು ಹಾಗೂ ಸಂಬಂಧ ಪಟ್ಟ ಅಧಿಕಾರಿಗಳ ಪರಿಶೀಲನೆ ಸಭೆ ನಡೆಸಲಾಗುವುದು ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಗಣಿ ಇಲಾಖೆ ಉಪನಿರ್ದೇಶಕ ಡಾ.ಎಂ.ಜೆ.ಮಹೇಶ್, ಹಿರಿಯ ಭೂವಿಜ್ಞಾನಿ ನಾಗೇಂದ್ರಪ್ಪ ಸೇರಿಂದತೆ ಮತ್ತಿರರು ಇದ್ದರು.

# ನಿಕಟಪೂರ್ವ ಜಿಲ್ಲಾಧಿಕಾರಿಗೆ ಹೃದಯಸ್ಪರ್ಶಿ ಬೀಳ್ಕೊಡುಗೆ, ನೂತನ ಜಿಲ್ಲಾಧಿಕಾರಿಗೆ ಸ್ವಾಗತ

» ದಾವಣಗೆರೆ

ಕಳೆದೊಂದು ವರ್ಷದಿಂದ ಜಿಲ್ಲಾಧಿಕಾರಿಯಾಗಿ ಕೆಲಸ ಮಾಡಿದ್ದ ಡಾ: ವೆಂಕಟೇಶ್ ಎಂ.ವಿ ಅವರಿಗೆ ಹೃದಯಸ್ಪರ್ಶಿ ಬೀಳ್ಕೊಡುಗೆ ಮತ್ತು ನೂತನವಾಗಿ ಜಿಲ್ಲಾಧಿಕಾರಿಯಾಗಿ ಆಗಮಿಸಿರುವ ಜಿ.ಎಂ.ಗಂಗಾಧರಸ್ವಾಮಿಯವರಿಗೆ ಸ್ವಾಗತ ಮಾಡಲಾಯಿತು.



ಜುಲೈ10 ರಂದು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಬೀಳ್ಕೊಡುಗೆ ಹಾಗೂ ಸ್ವಾಗತ ಕಾರ್ಯಕ್ರಮವನ್ನು ವಿವಿಧ ಇಲಾಖೆ, ಸಂಘ, ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿತ್ತು. ಈ ವೇಳೆ ಮಾತನಾಡಿದ ನಿಕಟಪೂರ್ವ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಅಧಿಕಾರಿಗಳೊಂದಿಗೆ ತಂಡದ ರೀತಿಯಲ್ಲಿ ಕೆಲಸ ಮಾಡಿದ್ದರಿಂದ ಅನೇಕ ವರ್ಷಗಳಿಂದ ಬಗೆಹರಿಯದೆ ಇದ್ದ ಮತ್ತು ಜಟಿಲವಾದ ಸಮಸ್ಯೆಗಳನ್ನು ಇತ್ಯರ್ಥ ಮಾಡಲಾಯಿತು. ಇದಕ್ಕೆ ಬೇಕಾದ ಎಲ್ಲಾ ಸಹಕಾರ ಜನಪ್ರತಿನಿಧಿಗಳಿಂದ ಸಿಕ್ಕಿದ್ದರಿಂದ ಅಲ್ಪ ಅವಧಿಯಲ್ಲಿ ಗುರುತರವಾದ ಕೆಲಸ ಮಾಡಲು ಸಾಧ್ಯವಾಗಿತು. ಜಿಲ್ಲಾಧಿಕಾರಿಯಾಗಿ ಕೆಲಸ ಮಾಡುವಾಗ ಜನಪ್ರತಿನಿಧಿಗಳು, ಅಧಿಕಾರಿಗಳು, ಸಾರ್ವಜನಿಕರು, ರೈತರು, ಸಂಘ, ಸಂಸ್ಥೆಯವರ ವಿಶ್ವಾಸ ಪಡೆದು ಮಾಡಿದಾಗ ನಾವು ಮಾಡುವ ಕೆಲಸ ಸಂಪೂರ್ಣವಾಗಿ ಯಶಸ್ವಿಯಾಗಲು ಸಾಧ್ಯ, ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಕೈಗೊಂಡ ಜನಸ್ಪಂದನ ಕಾರ್ಯಕ್ರಮದಲ್ಲಿ ಅನೇಕ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಇತ್ಯರ್ಥ ಮಾಡಿ ಜನಮಾನಸದಲ್ಲಿ ಉಳಿಯುವಂತೆ ಮಾಡಲಾಗಿದೆ ಎಂದು ತಮ್ಮ ಅವಧಿಯಲ್ಲಾದ ಅತ್ಯುತ್ತಮ ಕೆಲಸಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಎಲ್ಲಾ ಇಲಾಖೆ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಿದ್ದರಿಂದ ದಾವಣಗೆರೆ ಜಿಲ್ಲೆ ಹಲವು ಪ್ರಗತಿಯಲ್ಲಿ ರಾಜ್ಯದಲ್ಲಿ ಮೊದಲ ಸ್ಥಾನದಲ್ಲಿದೆ. ಅದು ಲ್ಯಾಂಡ್‌ಬೀಟ್, ಪಹಣಿಗೆ ಆಧಾರ್ ಜೋಡಣೆ ಸೇರಿದಂತೆ ರಾಜ್ಯದಲ್ಲಿ ಗುರುತಿಸಿಕೊಂಡ ಜಿಲ್ಲೆಯಾಗಿದೆ ಎಂದರು.

ನೂತನ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಎಲ್ಲರ ಸಹಕಾರ, ಎಲ್ಲರೊಟ್ಟಿಗೆ ಸೇರಿ ಜಿಲ್ಲೆಯ ಅಭಿವೃದ್ಧಿ ಮಾಡೋಣ, ಸಮಸ್ಯೆ ಬರುತ್ತವೆ, ಬಂದ ಸಮಸ್ಯೆಗಳನ್ನು ಬಗೆಹರಿಸುವುದಕ್ಕಾಗಿಯೇ ಅಧಿಕಾರಿ ವರ್ಗ ಇರುವುದು, ತಂಡವಾಗಿ ಕೆಲಸ ಮಾಡೋಣ ಎಂದರು. ಅನೇಕ ಹಿಂದಿನ ಜಿಲ್ಲಾಧಿಕಾರಿಗಳ ತಮ್ಮ ಸೇವಾ ಅವಧಿಯಲ್ಲಿ ಮಾಡಿದ ಕೆಲಸಗಳು, ಆಡಳಿತಾತ್ಮಕ ಅನುಭವಗಳ ಸಂಗ್ರಹವನ್ನು ಪುಸ್ತಕದ ರೂಪದಲ್ಲಿ ತಂದಿದ್ದಾರೆ. ಅಂತಹ ಪುಸ್ತಕಗಳನ್ನು ಓದುವ ಮೂಲಕ ಜನರ ಸೇವೆಯನ್ನು ಯಾವ ರೀತಿ ಹೊಸ ಉದ್ದೇಶದಿಂದ ಕೆಲಸ ಮಾಡಬಹುದೆಂದು ಎಲ್ಲರ ಒಗ್ಗಟ್ಟಿನಿಂದ ಕೆಲಸ ಮಾಡೋಣ ಎಂದ ಅವರು ಆಡಳಿತಾತ್ಮಕ ವಿಷಯಗಳಲ್ಲಿ ಕಠಿಣತೆಯು ಇರುತ್ತದೆ, ಕೆಲಸ ಮಾಡಿದವರಮೇಲೆಸರಳತೆಯುಇರುತ್ತದೆಎಂದು ಮಾರ್ಮಿಕವಾಗಿ ಹೇಳಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ನ್ಯಾಯಮೂರ್ತಿಗಳಾದ ಸುಭಾಷ್ ಬಿ.ಆಡಿ, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್,ಪಾಲಿಕೆಆಯುಕ್ತರಾದರೇಣುಕಾ, ಉಪವಿಭಾಗಾಧಿಕಾರಿ ದುರ್ಗಶ್ರೀ, ಅಭಿಷೇಕ್ ವಿ, ನಿಕಟ ಪೂರ್ವ,ನೂತನ ಜಿಲ್ಲಾಧಿಕಾರಿಯವರ ಶ್ರೀಮತಿಯವರ ಉಪಸ್ಥಿತರಿದ್ದರು.

### ನಗರ ಆಶ್ರಯ ಸಮಿತಿ ಸದಸ್ಯರಾಗಿ ನೇಮಕಗೊಂಡಿರುವ ಮುನಿರಾಗೆ ವೀರೇಂದ್ರರವರಿಂದ ನೇಮಕ ಪತ್ರ



» ಚಿತ್ರದುರ್ಗ

ನಗರ ಆಶ್ರಯ ಸಮಿತಿ ಸದಸ್ಯರಾಗಿ ನೇಮಕಗೊಂಡಿರುವ ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಮುನಿರಾ ಎ.ಮಕಾಂದಾರ್ ಇವರಿಗೆ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನೇಮಕ ಪತ್ರ ವಿತರಿಸಿದರು. ಕಾಂಗ್ರೆಸ್ ನೇತೃತ್ವದ ಸರ್ಕಾರ ರಾಜ್ಯದಲ್ಲಿ ಅಧಿಕಾರದಲ್ಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಧಾನಸಭೆ ಚುನಾವಣೆ ಪೂರ್ವದಲ್ಲಿಯೇ ಐದು ಉಚಿತ ಗ್ಯಾರೆಂಟಿಗಳನ್ನು ನೀಡಿದ್ದಾರೆ. ನಿಮಗೆ ಸಿಕ್ಕಿರುವ ಅವಕಾಶವನ್ನು ಬಡವರ ಸೇವೆಗೆ ಬಳಸಿಕೊಳ್ಳಿ ಎಂದು ಮುನಿರಾ ಎ.ಮಕಾಂದಾರ್‌ಗೆ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಸೂಚಿಸಿದರು. ನನ್ನ ಮೇಲೆ ನಂಬಿಕೆಯಿಟ್ಟು ಆಶ್ರಯ ಸಮಿತಿ ಸದಸ್ಯೆಯನ್ನಾಗಿ ನೇಮಕ ಮಾಡಿದ್ದೀರ. ನಿಮ್ಮ ನಂಬಿಕೆಗೆ ಧಕ್ಕೆ ಬರದ ರೀತಿಯಲ್ಲಿ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಬಡವರಿಗೆ ತಲುಪಿಸುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದು ಮುನಿರಾ ಎ.ಮಕಾಂದಾರ್ ಭರವಸೆ ನೀಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಗ್ಯಾರೆಂಟಿ ಅನುಷ್ಟಾನ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್, ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಮೋಕ್ಷರುದ್ರಸ್ವಾಮಿ, ಸೇವಾದಳ ಮಹಿಳಾಧ್ಯಕ್ಷೆ ಇಂದಿರಾ ಇನ್ನು ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ತಾಲ್ಲೂಕು ವಿವಿಧ ಹಂತಗಳ ಕ್ರೀಡಾಕೂಟ ಸಂಘಟನಾ ಸಭೆ

# ದೈಹಿಕ ಶಿಕ್ಷಣದಿಂದ ವಿದ್ಯಾರ್ಥಿಗಳಲ್ಲಿ ಶಿಸ್ತು: ಬಿಇಒ

» ಚಳ್ಳಕೆರೆ

ವಿದ್ಯಾರ್ಥಿಗಳು ಜವಾಬ್ದಾಯುತವಾಗಿ ಶಿಕ್ಷಣವನ್ನು ಕಲಿಯಲು ಅವರಿಗೆ ದೈಹಿಕ ಶಿಕ್ಷಣದ ಅವಶ್ಯಕತೆ ಇದೆ. ಪ್ರತಿನಿತ್ಯ ದೈಹಿಕ ಶಿಕ್ಷಕರ ಮಾರ್ಗದರ್ಶನದಲ್ಲಿ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿದರೆ ಇನ್ನೂ ಹೆಚ್ಚಿನ ನೈಪುಣ್ಯತೆ ವಿದ್ಯಾರ್ಥಿಗಳಲ್ಲಿ ಗೋಚರವಾಗಲಿದೆ. ದೈಹಿಕ ಶಿಕ್ಷಣ ಶಿಕ್ಷಣದ ಅವಿಭಾಜ್ಯಅಂಗವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.



ಅವರು, ಬುಧವಾರ ವಿಶ್ವಭಾರತಿಪ್ರೌಢಶಾಲೆ ಸಭಾಂಗಣದಲ್ಲಿ ತಾಲ್ಲೂಕು ದೈಹಿಕ ಶಿಕ್ಷಕರ ಸಂಘದ ವಿವಿಧ ಹಂತಗಳ ಕ್ರೀಡಾಕೂಟದ ಸಂಘಟನಾ ಸಭೆಯನ್ನು ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ದೈಹಿಕ ಶಿಕ್ಷಕ ಮತ್ತು ಶಿಕ್ಷಕರ ನಡುವೆ ತಾರತಮ್ಯವಿದೆ ಎಂಬ ಆರೋಪ ಕೇಳಿ ಬರುತ್ತಿದೆ. ಪ್ರಾಯಶಃ ನಮ್ಮ ತಾಲ್ಲೂಕಿನಲ್ಲಿ ಯಾವುದೇ ಇಂತಹ ಬೆಳವಣಿಗೆಗಳು ಕಂಡುಬಂದಿಲ್ಲ. ದೈಹಿಕ ಮತ್ತು ಸಾಮಾನ್ಯ ವಿಷಯ ಶಿಕ್ಷಕರ ನಡುವೆ ಹೆಚ್ಚು ಸಾಮರಸ್ಯವಿರುವುದು ಸಂತಸ ತಂದಿದೆ ಸಣ್ಣ,ಪುಟ್ಟ ಸಮಸ್ಯೆಗಳಿಗೆ ಯಾರೂ ಕಿವಿಗೊಡದೆ ಉತ್ತಮ ನೇರವಾಗಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿ ಮಾಹಿತಿ ನೀಡುವಂತೆ ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಸಿದ್ದಲಿಂಗಪ್ಪ, ದೈಹಿಕ ಶಿಕ್ಷಕ ಮತ್ತು ಸಾಮಾನ್ಯ ವಿಷಯ ಶಿಕ್ಷಕರ ನಡುವೆ ಅಸಮದಾನವಿರುವುದು ಸುಳ್ಳಲ್ಲ. ಪ್ರತಿಯೊಂದು ಹಂತದಲ್ಲೂ ಮಲತಾಯಿ ಧೋರಣೆ ತಾಳಲಾಗುತ್ತಿದೆ ಎಂಬ ಭಾವನೆ ಎಲ್ಲಾ ದೈಹಿಕ ಶಿಕ್ಷಕರಲ್ಲಿದೆ. ಈ ಬಗ್ಗೆ ಹಿರಿಯ ಅಧಿಕಾರಿಗಳು ಚಿಂತನೆ ನಡೆಸಿ ಸಮಾನತೆಯನ್ನು ಮೂಡಿಸುವಲ್ಲಿ ಯಶಸ್ವಿಯಾಗಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವಭಾರತಿಪ್ರೌಢಶಾಲೆಯ ಮುಖ್ಯ ಶಿಕ್ಷಕ ಜಿ.ಟಿ.ವೀರಭದ್ರಸ್ವಾಮಿ ಮಾತನಾಡಿ, ದೈಹಿಕ ಶಿಕ್ಷಕರ ಸಂಘದ ಚಟುವಟಿಕೆಗಳಿಗೆ ಕಳೆದ ಹಲವಾರು ವರ್ಷಗಳಿಂದ ಸಹಕಾರ ನೀಡುತ್ತಾ ಬಂದಿದ್ದೇವೆ. ಶಿಕ್ಷಕರಲ್ಲಿ ಅಸಮಾನತೆ ತಲೆದೋರಿದರೆ ವಿದ್ಯಾರ್ಥಿಗಳು ಆತ್ಮಸ್ಥೈರ್ಯ ಕಡಿಮೆಯಾಗುತ್ತದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಶಿಕ್ಷಕರ ನಡುವೆಯೇ ಒಡಂಬಡಿಕೆ ಮಾಡುವಂತೆ ಮನವಿ ಮಾಡಿದರು. ತಾಲ್ಲೂಕಿ ದೈಹಿಕ ಶಿಕ್ಷಕರ ನಿರ್ದೇಶಕ ಸುನೀಲ್‌ನಾಯ್ಕ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹಲಿಂಗಪ್ಪ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ರಾಜಕುಮಾರ್ ಮಾತನಾಡಿದರು. ಕಾರ್ಯದರ್ಶಿ ಶ್ರೀರಾಮನಾಯಕ, ಖಜಾಂಚಿ ಮರವಾಯಿಶ್ರೀನಿವಾಸ್, ಕೆ.ಟಿ.ವೇಲೂರು, ಉಮೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡೆಂಗ್ಯೂ ನಿಯಂತ್ರಣಕ್ಕೆ ಇಓಗೆ ರೈತ ಸಂಘ ಮನವಿ



» **ಚಳ್ಳಕೆರೆ**

ಇತ್ತೀಚಿನದಿನಗಳಲ್ಲಿತಾಲ್ಲೂಕಿನಾದ್ಯಂತವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಚತೆ ಇಲ್ಲದ ಕಾರಣ ಡೆಂಗ್ಯೂ ವ್ಯಾಪಿಸುವ ಆತಂಕವಿದ್ದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಗ್ರಾಮೀಣ ಭಾಗದ ಸ್ವಚ್ಚತೆ ಆದ್ಯತೆ ನೀಡುವ ಮೂಲಕ ಡೆಂಗ್ಯೂ ನಿಯಂತ್ರಣಕ್ಕೆ ಮುಂದಾಗಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ಲಿಖಿತ ಮೂಲಕ ಮನವಿ ಮಾಡಿದೆ. ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಮಾತನಾಡಿ, ಚಳ್ಳಕೆರೆ ತಾಲ್ಲೂಕಿನಲ್ಲಿ ಒಟ್ಟು 40 ಗ್ರಾಮ ಪಂಚಾಯಿತಿಗಳಿದ್ದು ಬಹುತೇಕ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸ್ವಚ್ಚತೆ ಮಾಯವಾಗಿದೆ. ಹೆಣ್ಣೆಸೊಳ್ಳೆಯಿಂದಲೇ ಡೆಂಗ್ಯೂ ರೋಗ ವ್ಯಾಪಕವಾಗಿ ಹರಡಲಿದ್ದು ನಿಂತನೀರೇ ಈ ಸೊಳ್ಳೆಗಳಿಗೆ ನೆಮ್ಮದಿ ತಾಣವಾಗಿದೆ. ಆದ್ದರಿಂದ ಎಲ್ಲೂ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕಿದ್ದು, ಸಾರ್ವಜನಿಕ ಆರೋಗ್ಯದ ಹಿತದೃಷ್ಠಿಯಿಂದ ರೈತ ಸಂಘ ಮನವಿ ಮೂಲಕ ಒತ್ತಾಯ ಪಡಿಸಿದೆ ಎಂದರು. ಮನವಿ ಸ್ವೀಕರಿಸಿ ಮಾತನಾಡಿದ ಇಓ ಎಚ್.ಶಶಿಧರ, ಡೆಂಗ್ಯೂ ನಿಯಂತ್ರಣ ಕುರಿತಂತೆ ಈಗಾಗಲೇ ತಾಲ್ಲೂಕು ಮಟ್ಟದಲ್ಲಿ ಪ್ರಮುಖ ಸಭೆಗಳನ್ನು ನಡೆಸಿ ನಿರ್ದೇಶನ ನೀಡಲಾಗಿದೆ. ಸಧ್ಯದ ಸ್ಥಿತಿಯಲ್ಲಿ ತಾಲ್ಲೂಕಿನಲ್ಲಿ 32 ಡೆಂಗ್ಯೂ ಪ್ರಕರಣ ಬೆಳಕಿಗೆ ಬಂದಿದ್ದರೂ ಅವು ಸಾಮಾನ್ಯವಾಗಿವೆ. ರೈತ ಸಂಘ ನೀಡಿದ ಮನವಿ ಸ್ವೀಕರಿಸಿದ್ದು ಸ್ವಚ್ಚತೆಯ ಬಗ್ಗೆ ಗಮನಹರಿಸಲಾಗುವುದು ಎಂದರು.

ಭದ್ರಾ ಮೇಲ್ದಂಡೆ ಯೋಜನೆ ಪ್ರಗತಿ ಪರಿಶೀಲನೆ ಸಭೆ -ಯೋಜನೆ ಜಿಲ್ಲೆಗೆ ವರದಾನ: ಸಂಸದ ಗೋವಿಂದ ಎಂ.ಕಾರಜೋಳ ಹೇಳಿಕೆ

# ಭೂಸ್ವಾಧೀನ ಪ್ರಕ್ರಿಯೆ ಚುರುಕುಗೊಳಿಸಿ

» **ಚಿತ್ರದುರ್ಗ**

ಬರಪೀಡಿತ ಜಿಲ್ಲೆ ಎಂಬ ಹಣೆಪಟ್ಟಿ ಕಳಚಲು ಭದ್ರಾ ಮೇಲ್ದಂಡೆ ಯೋಜನೆ ಚಿತ್ರದುರ್ಗ ಜಿಲ್ಲೆಗೆ ವರದಾನವಾಗಿದೆ. ಯೋಜನೆ ಪೂರ್ಣಗೊಳಿಸಲು ಅಗತ್ಯ ಇರುವ ರೈತರ ಜಮೀನು ಭೂಸ್ವಾಧೀನ ಪ್ರಕ್ರಿಯೆಯನ್ನು ಚುರುಕುಗೊಳಿಸುವಂತೆ ಅಧಿಕಾರಿಗಳಿಗೆನಿರ್ದೇಶನನೀಡಿರುವುದಾಗಿ ಸಂಸದ ಗೋವಿಂದ ಎಂ.ಕಾರಜೋಳ ಹೇಳಿದರು.

ನಗರದ ಭದ್ರಾ ಮೇಲ್ದಂಡೆ ಯೋಜನೆ ಕಚೇರಿಯಲ್ಲಿ ಯೋಜನೆಯ ಪ್ರಗತಿ ಪರಿಶೀಲನೆ ಸಭೆ ನಡೆಸಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಭದ್ರಾ ಮೇಲ್ದಂಡೆ ಯೋಜನೆಯಿಂದ ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಹಾಗೂ ದಾವಣಗೆರೆ ಜಿಲ್ಲೆಗಳಿಗೆ ನೀರಾವರಿ ಸೌಲಭ್ಯ ದೊರಕುವುದರೊಂದಿಗೆ, ಕುಡಿಯುವ ನೀರಿನ ಸಮಸ್ಯೆಯು ಪರಿಹಾರವಾಗುತ್ತದೆ. ಯೋಜನೆಯನ್ನು ಆದಷ್ಟು ಶೀಘ್ರದಲ್ಲಿ ಪೂರ್ಣಗೊಳಿಸಬೇಕು ಎಂಬುದು ನನ್ನ ಆಸೆಯಾಗಿದೆ. ಯೋಜನೆ ಪೂರ್ಣಗೊಳ್ಳದೆ ಚಿತ್ರದುರ್ಗ ಜಿಲ್ಲೆಗೆ ಬರ ಪೀಡಿತ ಎಂಬ ಹಣೆಪಟ್ಟಿ ಅಳಿಸಲು ಆಗುವುದಿಲ್ಲ. ಯೋಜನೆ ಅನುಷ್ಠಾನಕ್ಕಾಗಿ ಭೂಸ್ವಾಧೀನ ಅಧಿಕಾರಿಗಳಿಂದ, ವಿವಿಧ ಇಲಾಖೆ ಅಧಿಕಾರಿಗಳು, ರಾಜ್ಯ ಹಾಗೂ ಕೇಂದ್ರ ಸಚಿವರವರೆಗೂ ಹಿಂಬಾಲು ಬಿದ್ದು ಯೋಜನೆ ಕಾರ್ಯ ಮುಂದುವರಿಸುವುದಾಗಿ ತಿಳಿಸಿದರು.

2008-09 ರಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ರೂ.5900 ಕೋಟಿಗೆ ಅನುಮೋದನೆ ನೀಡಲಾಗಿತ್ತು. 2015 ರಲ್ಲಿ



ಯೋಜನೆಯ ವೆಚ್ಚವನ್ನು ರೂ.12,000 ಕೋಟಿ ಪರಿಷ್ಕೃತಗೊಳಿಸಲಾಯಿತು. ಅಂತಿಮವಾಗಿ 2020 ರಲ್ಲಿ ಯೋಜನೆ ಪರಿಷ್ಕೃತ ವೆಚ್ಚ ರೂ.21463 ಕೋಟಿಗೆ ಅನುಮೋದನೆ ನೀಡಿ ಸರ್ಕಾರ ಆದೇಶಿಸಿದೆ. ಸುಮಾರು ರೂ.10,000 ಕೋಟಿಯಷ್ಟು ಯೋಜನೆಗೆ ವೆಚ್ಚ ಮಾಡಲಾಗಿದೆ. ಇನ್ನೂ ರೂ.11,500 ಕೋಟಿಯಷ್ಟು ಯೋಜನೆ ಕಾಮಗಾರಿ ಬಾಕಿಯಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ಘೋಷಿಸಿದ ರೂ.5300 ಕೋಟಿಯನ್ನು ಈ ಬಾರಿಯ ಬಜಟ್‌ನಲ್ಲೂ ಮುಂದುವರಿಸುವುದಾಗಿ ಕೇಂದ್ರ ಸರ್ಕಾರದ ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಭರವಸೆ ನೀಡಿದ್ದಾರೆ. ತಾಂತ್ರಿಕವಾಗಿ ಯೋಜನೆಯ ವಿವರವನ್ನು ರಾಜ್ಯ ಸರ್ಕಾರ ನೀಡಿದ ತಕ್ಷಣವೇ ಅನುದಾನ ಬಿಡುಗಡೆ ಮಾಡುವುದಾಗಿ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಪ್ರಸಕ್ತ ವರ್ಷದಲ್ಲಿ ರೂ.1400 ಕೋಟಿ ಯೋಜನೆಗೆ ನೀಡಿದೆ. ಗುತ್ತಿಗೆದಾರರ ಹಣ ಬಾಕಿ ಇರುವ ಕಾರಣ ಯೋಜನೆ ನಿಧಾನ ಗತಿಯಲ್ಲಿ ಸಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವ ಕುಮಾರ್ ಅವರ ಬಳಿ, ಯೋಜನೆಗೆ ರೂ.3000 ಕೋಟಿ ಒದಗಿಸಲು ಕೇಳಿಕೊಂಡಿದ್ದೇನೆ ಎಂದರು. ಯೋಜನೆ ಸುಗಮ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ಗಮನಕ್ಕೆ ತಂದ ವಿಷಯಗಳ ಪರಿಹಾರಕ್ಕಾಗಿ, ಚಿಕ್ಕಮಗಳೂರು ಜಿಲ್ಲಾಧಿಕಾರಿ, ಭೂಸ್ವಾಧೀನಾಧಿಕಾರಿ, ಅರಣ್ಯ ಇಲಾಖೆ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಕರೆ ಮಾಡಿ ಮಾತನಾಡಿ, ಸಮಸ್ಯೆ ಬಗೆ ಹರಿಸುವಂತೆ ತಿಳಿಸಿದ್ದೇನೆ ಎಂದರು.ಯೋಜನೆಗೆ ಅಗತ್ಯವಾದ 1,700 ಎಕರೆ ಭೂಮಿ ಸ್ವಾಧೀನ ಪ್ರಕ್ರಿಯೆ ಬಾಕಿ ಉಳಿದಿದೆ. ರೈತರು ಹೆಚ್ಚಿನ ಪರಿಹಾರಕ್ಕಾಗಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಇವುಗಳನ್ನು ತೆರುವು ಗೊಳಿಸಿ ಯೋಜನೆ ಅನುಷ್ಠಾನ ಮಾಡಲಾಗುವುದು. ರೈತರು ಪರಿಹಾರ ಪಡೆಯಲು ನಿರಾಕರಿಸಿದರೆ, ಆ ಹಣವನ್ನು ಜಿಲ್ಲಾಧಿಕಾರಿಗಳ ಖಾತೆಯಲ್ಲಿರಿಸಿ, ಪೊಲೀಸ್ ರಕ್ಷಣೆ ಪಡೆದು ಕಾಮಗಾರಿ ಮುಂದುವರೆಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ.ಭೂಸ್ವಾಧೀನ ಕಾಯ್ದೆ ಅನುಸಾರ ಜಮೀನಿನ ನಾಲ್ಕು ಪಟ್ಟು ಹೆಚ್ಚಿನ ಪರಿಹಾರ ಹಣ ನೀಡಲು ಸಾಧ್ಯವಿದೆ. ನಿಯಮಾನುಸಾರ ಪರಿಹಾರವನ್ನು ರೈತರು ಪಡೆದುಕೊಳ್ಳಬೇಕು. ನ್ಯಾಯಾಲಯ ಹೆಚ್ಚಿನ ಪರಿಹಾರ ನೀಡಲು ಆದೇಶಿಸಿದರೆ ಅದಕ್ಕನುಗುಣವಾಗಿ ಪರಿಹಾರ ಹಣ ರಾಜ್ಯ ಸರ್ಕಾರ ನೀಡಲಿದೆ. ಸದ್ಯ ನೀಡುವ ಪರಿಹಾರ ಹಣ ಪಡೆದು ಯೋಜನೆ ಅನುಷ್ಠಾನಕ್ಕೆ ಅನುವು ಮಾಡಿಕೊಡಬೇಕು ಎಂದು ರೈತ ಬಾಂಧವರಿಗೂ ವಿನಂತಿ ಮಾಡುತ್ತೇನೆ ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.ಸುಮಾರು ರೂ.1,700 ಕೋಟಿಯಷ್ಟು ಗುತ್ತಿದಾರರ ಪಾವತಿ ಬಾಕಿಯಿದೆ. ಇದರಿಂದಾಗಿ ಕಾಮಗಾರಿ ವಿಳಂಬವಾಗುತ್ತಿದೆ. ಇದರೊಂದಿಗೆ ಭೂಸ್ವಾಧೀನವು ಸೇರಿ ರೂ.2000 ಕೋಟಿಯಷ್ಟು ಯೋಜನೆಯ ಪಾವತಿ ಬಾಕಿಯಿದೆ. ಕೇಂದ್ರ ಸರ್ಕಾರ ನೀಡುವ ರೂ.5,300 ಕೋಟಿ ಹಣವನ್ನು ಪ್ರತ್ಯೇಕ ಖಾತೆಯಲ್ಲಿ ನಿರ್ವಹಿಸಬೇಕಿದೆ. ಈಗಾಗಲೇ ಗುತ್ತಿಗೆ ನೀಡಿರುವ ಕಂಪನಿಗಳಿಗೆ ನಿಯಮಾನುಸಾರ, ಪತ್ರ ವ್ಯವಹಾರ, ನೋಟಿಸು ನೀಡಿ ನ್ಯಾಯಾಲಯದ ಮೊರೆ ಹೋಗಲು ಅವಕಾಶವಾಗದಂತೆ ಗುತ್ತಿಗೆಯನ್ನು ರದ್ದುಗೊಳಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಮಾಧ್ಯಮವರ ಪ್ರಶ್ನೆಗೆ ಸಂಸದ ಗೋವಿಂದ ಎಂ.ಕಾರಜೋಳ ಉತ್ತರಿಸಿದರು.

ತುಂಗಾ ಜಲಾಶಯದ ಹಿನ್ನೀರಿನ ಮುಳುಗಡೆ ಪ್ರದೇಶದಲ್ಲಿ ಭದ್ರಾ ಮೇಲ್ದಂಡೆ ಯೋಜನೆಯ ಟವರ್‌ಗಳು ಹಾದು ಹೋಗಲಿವೆ. ಇದಕ್ಕೆ ಅರಣ್ಯ ಇಲಾಖೆ ಅನುಮತಿ ನೀಡಬೇಕು. ಈ ಕುರಿತು ಸಂಬಂಧ ಪಟ್ಟ ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಶೀಘ್ರವೇ ಅನುಮತಿ ನೀಡುವುದಾಗಿ ಭರವಸೆ ನೀಡಿದ್ದಾರೆ. ರಾಜ್ಯ ಸರ್ಕಾರ ಮುಖ್ಯ ಕಾರ್ಯದರ್ಶಿಗೆ ಭದ್ರಾ ಮೇಲ್ದಂಡೆ ಯೋಜನೆ ಪ್ರಗತಿ ಪರಿಶೀಲನೆಗಾಗಿ ಎಲ್ಲಾ ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳ ಸಭೆ ಕರೆಯುವಂತೆ ಸೂಚನೆ ತಿಳಿಸಿದ್ದೇನೆ ಎಂದು ಪರ್ತಕರ್ತರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಅಭಿಯಂತರ ಎಂ.ಹೆಚ್.ಲಮಾಣಿ ಸೇರಿದಂತೆ ಮತ್ತಿರರು ಇದ್ದರು.

## ಮೇದಾರ ಕೇತೇಶ್ವರ ಮಠದಲ್ಲಿನ ಮಕ್ಕಳಿಗೆ ಪೂರ್ಣಿಮ ಶ್ರೀನಿವಾಸ್ ದಂಪತಿಗಳಿಂದ ಉಚಿತ ಸಮವಸ್ತ್ರ ವಿತರಣೆ

» **ಚಿತ್ರದುರ್ಗ**

ಬಡ ಮಕ್ಕಳ ಶಿಕ್ಷಣಕ್ಕೆ ಅವಶ್ಯವಿರುವ ವಸ್ತುಗಳನ್ನು ಹಿಂದಿನಿಂದಲೂ ನೀಡುತ್ತಾ ಬರುತ್ತಿರುವ ಮಾಜಿ ಶಾಸಕಿ ಪೂರ್ಣಿಮ ಶ್ರೀನಿವಾಸ್ ಹಾಗೂ ಪತಿ ವಿಧಾನಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್ ಇವರುಗಳ ಸೇವೆ ಶ್ಲಾಘನೀಯ ಎಂದು ಬಸವ ಮೇದಾರ ಕೇತೇಶ್ವರ ಸ್ವಾಮೀಜಿ ಸಂತಸ ವ್ಯಕ್ತಪಡಿಸಿದರು.

ಸೀಬಾರದ ಸಮೀಪವಿರುವ ಮೇದಾರ ಕೇತೇಶ್ವರ ಮಠದಲ್ಲಿ 8, 9, 10 ನೇ ತರಗತಿಯ 150 ಬಡ ಮಕ್ಕಳಿಗೆ ಉಚಿತ ಸಮವಸ್ತ್ರಗಳ ವಿತರಣೆಯ ಸಾನಿಧ್ಯ ವಹಿಸಿ ಮಾತನಾಡಿದರು.

ಪೂರ್ಣಿಮ ಶ್ರೀನಿವಾಸ್‌ರವರು ಶಾಸಕರಾಗಿದ್ದಾಗಲೂ ನಮ್ಮ ಮಠದ ಬಡ ಮಕ್ಕಳ ಶಿಕ್ಷಣಕ್ಕೆ ಏನು ಕೇಳಿದರೂ ಇಲ್ಲವೆನ್ನಲಿಲ್ಲ. ನಮ್ಮ ಮಠದ ಜೊತೆ ಮೊದಲಿನಿಂದಲೂ ವಿನಾಬಾವ ಒಡನಾಟವಿದೆ. ಬಡ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರ ಎಲ್ಲಾ ರೀತಿಯ ಸೌಲತ್ತುಗಳನ್ನು ನೀಡುತ್ತಿದೆ. ಇದರ ಜೊತೆಗೆ ಇಂತಹ ದಾನಿಗಳು ಕೈಜೋಡಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಗುಣಗಾನ ಮಾಡಿದರು.

ಹಳ್ಳಿಗಾಡಿನಿಂದ ಬರುವ ಬಡ ಕುಟುಂಬದ ಮಕ್ಕಳು ಬಟ್ಟೆ ಕೊಂಡುಕೊಳ್ಳಲು ಆಗದಂತ



ಕಡು ಕಷ್ಟದಲ್ಲಿರುತ್ತಾರೆ. ಇಂತಹ ಮಕ್ಕಳಿಗೆ ಪೂರ್ಣಿಮ ಶ್ರೀನಿವಾಸ್ ದಂಪತಿಗಳು ಸಮವಸ್ತ್ರಗಳನ್ನು ಉದಾರ ಮನಸ್ಸಿನಿಂದ ಕೊಡಿಸಿದ್ದಾರೆ. ಇದೇ ರೀತಿ ಇನ್ನು ಅನೇಕ ಪರೋಪಕಾರದ ಸೇವೆ ಮಾಡುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಸ್ವಾಮೀಜಿ ಹಾರೈಸಿದರು.

ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡಿ ಮೇದಾರ ಎನ್ನುವ ಬುಡಕಟ್ಟು ಸಮುದಾಯ ಅತ್ಯಂತ ಕಡು ಬಡತನದಲ್ಲಿದ್ದು, ಶಿಕ್ಷಣದ ಮೂಲಕ ಬದುಕನ್ನು ಹಸನು ಮಾಡಿಕೊಳ್ಳಬೇಕು. ಮಠದ ಸುತ್ತಲು ಒಳ್ಳೆಯ ಪ್ರಶಾಂತ ವಾತಾವರಣವಿದ್ದು, ಮಕ್ಕಳು ಇದರ ಸದುಪಯೋಗಪಡಿಸಿಕೊಂಡು ಶಿಕ್ಷಣವಂತರಾಗುವ ಮೂಲಕ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳುವಂತೆ ಕರೆ ನೀಡಿದರು.

ವಿದ್ಯಾರ್ಥಿ ಜೀವನ ಎನ್ನುವುದು ವೈಯಾರ ಪುಂಡಾಟಿಕೆ ಮಾಡುವುದಲ್ಲ. ಶ್ರದ್ದೆ ವಹಿಸಿ ಕಠಿಣ ಪರಿಶ್ರಮದಿಂದ ಶಿಕ್ಷಣ ಕಲಿತಾಗ ಜೀವನದಲ್ಲಿ ಉನ್ನತ ಹುದ್ದೆಯನ್ನು ಅಲಂಕರಿಸಲು ಸಾಧ್ಯ. ಬುದ್ದ, ಬಸವ, ಅಂಬೇಡ್ಕರ್‌ರವರ ಆಶಯದಂತೆ ನೀವುಗಳು ವಿದ್ಯಾವಂತರಾಗಬೇಕು ಎಂದರು.

ಕಣಿವೆ ಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ ಬೆಳಗಟ್ಟ, ಪೊಲೀಸ್ ವೃತ್ತ ನಿರೀಕ್ಷಕ ತಿಪ್ಪೇಸ್ವಾಮಿ, ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ವೇಮನರೆಡ್ಡಿ ಇನ್ನು ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು.

## ಸಿಐಟಿಯು ಕಾರ್ಮಿಕ ಸಂಘಟನೆಯಿಂದ ಬೇಡಿಕೆ ಈಡೇರಿಕೆಗೆ ಒತ್ತಾಯ

» **ಚಳ್ಳಕೆರೆ**

ತಾಲ್ಲೂಕಿನಸಿಐಟಿಯುಕಾರ್ಮಿಕಸಂಘಟನೆಯ ವತಿಯಿಂದ ಬುಧವಾರ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಕೇಂದ್ರ ಚಿತ್ತಸಚಿವರು ಮತ್ತು ರಾಜ್ಯದ ಮುಖ್ಯಮಂತ್ರಿಗೆ ಸುಮಾರು 30 ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮನವಿ ಸಲ್ಲಿಸಲಾಯಿತು.

ತಾಲ್ಲೂಕು ಕಾರ್ಯದರ್ಶಿ ಟಿ.ತಿಪ್ಪೇಸ್ವಾಮಿ ಮನವಿ ಸಲ್ಲಿಸಿ ಮಾತನಾಡಿ, ಸಂಘಟನೆವತಿಯಿಂದ ಒಟ್ಟು 30 ಬೇಡಿಕೆ ಈಡೇರಿಸುವಂತೆ ಮನವಿ ಮಾಡಿದೆ. ವಿಶೇಷವಾಗಿ ಕಾರ್ಮಿಕ ಸಂಘಟನೆಗೆ ಮಾರಕವಾಗಿರುವ ನಾಲ್ಕು ಪ್ರಮುಖ ಕಾನೂನು ಹಿಂಪಡೆಯುವುದು ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ಹಿಂಪಡೆಯುವುದು ಸೇರಿದಂತೆ ಒಟ್ಟು 30 ಬೇಡಿಕೆ ಈಡೇರಿಸುವಂತೆ ಮನವಿ ಸಲ್ಲಿಸಲಾಗಿದೆ ಎಂದರು.

ಶಿರಸ್ಥೇದಾರ್ ಹಸೀನಬೇಗಂ ತಹಶೀಲ್ದಾರ್ ಪರವಾಗಿ ಮನವಿ ಸ್ವೀಕರಿಸಿ ಮಾತನಾಡಿ, ತಮ್ಮ ಭೇಡಿಕೆಗಳ ಈಡೇರಿಕೆಗಾಗಿ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ತಾಲ್ಲೂಕು ಅಧ್ಯಕ್ಷ ಟಿ.ನಿಂಗಣ್ಣ, ಖಜಾಂಚಿ ಎಚ್.ಓ.ನಾಗರಾಜು ಮುಂತಾದವರು ಉಪಸ್ಥಿತರಿದ್ದರು.






## ಬಲಾಢ್ಯ ಆದಿಕರ್ನಾಟಕ ಸಮುದಾಯದಿಂದ ಆಸ್ತಿ ಹಕ್ಕಿಗಾಗಿ ಶೋಷಿತರಿಗೆ ಶೋಷಣೆ: ಮಹೇಶ್

» **ಚಳ್ಳಕೆರೆ**

ಚಿತ್ರದುರ್ಗ ಜಿಲ್ಲೆಯ ಆದಿಕರ್ನಾಟಕ ಸಮುದಾಯದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ಹಿನ್ನೆಲೆಯಲ್ಲಿ ಕಳೆದ ಸುಮಾರು 69 ವರ್ಷಗಳ ಹಿಂದೆ ಸರ್ಕಾರ ನೀಡಿದ ನಿವೇಶನದ ಹಕ್ಕಿಗಾಗಿ ಆದಿಕರ್ನಾಟಕ ಸಮಸ್ತ ಜನಾಂಗದ ಪರವಾಗಿ ಯಾರೂ ಸಹ ಇದನ್ನು ವೈಯಕ್ತಿಕವಾಗಿ ದುರುಪಯೋಗವಾಗದಂತೆ ತಡೆಯಲು ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಮಾದಿಗ ಸಾಂಸ್ಕೃತಿಕ ಸಂಘ ಜಿಲ್ಲಾ ಸಾಮಾಜಿಕ ಸಂಘರ್ಷ ಸಮಿತಿಯ ಹಿರಿಯ ನೇತಾರ, ನಿವೃತ್ತ ಉಪವಿಭಾಗಾಧಿಕಾರಿ ಎಂ.ಮಲ್ಲಿಕಾರ್ಜುನ್ ತಿಳಿಸಿದರು.

ಅವರು, ಬುಧವಾರ ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಚಿತ್ರದುರ್ಗ ನಗರದ ಮಧ್ಯಭಾಗದಲ್ಲಿರುವ 208*416 ಅಳತೆಯ ನಿವೇಶನವನ್ನು ಆದಿಕರ್ನಾಟಕ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ದೃಷ್ಠಿಯಿಂದ ಅಂದಿನ ಚಿತ್ರದುರ್ಗ ಪುರಸಭೆ ಉಚಿತವಾಗಿ ನೀಡಿತ್ತು. ಆದರೆ, 2010ರ ತನಕ ಇದೇ ಹೆಸರಿನಲ್ಲಿದ್ದ ಖಾತೆ ಕಸ್ತೂರಿಬಾ ವಿದ್ಯಾಭಿವೃದ್ಧಿ ಸಂಸ್ಥೆಯ ಹೆಸರಿಗೆ ಖಾತೆಯಾಗಿದ್ದು ಇದನ್ನು ಪ್ರತಿಭಟಿಸಿ ಚಿತ್ರದುರ್ಗದ ಪೌರಾಯುಕ್ತರಿಗೆ



ಮನವಿ ನೀಡಿದ ಹಿನ್ನೆಲೆಯಲ್ಲಿ 25 ಮೇ 2024ರಂದು ಕಸ್ತೂರಿಬಾ ವಿದ್ಯಾಭಿವೃದ್ಧಿ ಸಂಸ್ಥೆ ಹೆಸರನ್ನು ತೆಗೆದು ಆದಿಕರ್ನಾಟಕ ಹಾಸ್ಟೆಲ್‌ಗೆ ವರ್ಗಾವಣೆ ಮಾಡಲಾಯಿತು. ಆದರೂ ಸಹ ಈ ನಿವೇಶನವನ್ನು ಕೆಲವು ವ್ಯಕ್ತಿಗಳು ತಮ್ಮ ವೈಯಕ್ತಿಕ ಪ್ರತಿಷ್ಠೆಗಾಗಿ ಇದರ ಮೇಲೆ ಹಕ್ಕು ಸ್ಥಾಪಿಸಲು ಹೊರಟ್ಟಿದ್ದು ಈ ಬಗ್ಗೆ ಜಿಲ್ಲೆಯಾದ್ಯಂತ ಸಂಘಟನೆಯಿಂದ ಹೋರಾಟ ನಡೆಸಲಾಗುವುದು ಎಂದರು.

ನಿವೃತ್ತ ಜಂಟಿ ನಿರ್ದೇಶಕ ಹಾಗೂ ದಲಿತ ಸಂಘಟನೆಗಳ ಪ್ರಬುದ್ದ ನಾಯಕ ಪ್ರೊ.ಸಿ.ಕೆ.ಮಹೇಶ್ ಮಾತನಾಡಿ, ಜಿಲ್ಲೆಯಲ್ಲಿರುವ ಸಮುದಾಯದ ಹಿರಿಯ ರಾಜಕಾರಣಿಯೊಬ್ಬರು ಆದಿಕರ್ನಾಟಕ ಹಾಸ್ಟಲ್ ಸಮಿತಿ ರಚಿಸಿ ಅವರಿಗೆ ಈ ಆಸ್ತಿಯನ್ನು ಹಸ್ತಾಂತರ ಮಾಡಲು ಹೊರಟಿದ್ದಾರೆ. ಆದರೆ, ಅದು ಕೇವಲ ಕೆಲವು ಕುಟುಂಬಗಳಿಗೆ ಮಾತ್ರ ಸೀಮಿತವಾಗಲಿದೆ. ನಮ್ಮ ಮೂಲ ಉದ್ದೇಶ ಚಿತ್ರದುರ್ಗ ಜಿಲ್ಲೆಯ ಆದಿಕರ್ನಾಟಕ ಸಮುದಾಯದ ಆಸ್ತಿಯಾಗಿ ಇದು ಶಾಶ್ವತವಾಗಿರಬೇಕು. ನೋವಿನ ಸಂಗತಿ ಎಂದರೆ ಆದಿಕರ್ನಾಟಕ ಸಮುದಾಯದ ಬಲಿಷ್ಠನಾಯಕರೇ ಶೋಷಿತ ಸಮುದಾಯಕ್ಕೆ ಅನ್ಯಾಯ ಮಾಡಲು ಹೊರಟಿದ್ದಾರೆ. ಇದರ ವಿರುದ್ದ ಸಮುದಾಯದ ಜನಾಂದೋಲ ನಡೆಸಿ ನ್ಯಾಯುತವಾಗಿ ನಮ್ಮ ಹಕ್ಕನ್ನು ಸ್ಥಾಪಿಸಲು ದೃಢಹೆಜ್ಜೆ ಇಟ್ಟಿದ್ದೇವೆಂದರು.

ಪತ್ರಿಕಾಗೋಷ್ಠಿಯಲ್ಲಿ ಸಮುದಾಯದ ಮುಖಂಡರಾದ ಜಿ.ಎಚ್.ಹನುಮಂತಪ್ಪ, ಎಚ್.ಹನುಮಂತಪ್ಪ ಉಪಸ್ಥಿತರಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T